ಸಂಪುಟ : 9 ಸಂಚಿಕೆ 296 ಪುಟ : 4+2 ಬೆಲೆ: 3.00 ಮಂಗಳವಾರ ಜನವರಿ 7 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 9 Issue : 296 Pages : 4+2 Price : 3.00 Tuesday January 7 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಲೋಕಾಯುಕ್ತ ಜನ ಸಂಪರ್ಕ ಸಭೆ ಜ.13ಕ್ಕೆ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಜನವರಿ 8ರಂದು ಬೆಳಿಗ್ಗೆ 10.30 ಗಂಟೆಗೆ ಲಕ್ಷ್ಮೇಶ್ವರದ ತಹಸೀಲ್ದಾರರ ಕಚೇರಿ ಸಭಾಭವನದಲ್ಲಿ ನಿಗದಿಯಾಗಿದ್ದ ಲೋಕಾಯುಕ್ತ ಜನ ಸಂಪರ್ಕ ಸಭೆಯನ್ನು ಜನೆವರಿ 13 ಕ್ಕೆ ಮುಂದೂಡಲಾಗಿದೆ. ಆ.13ರಂದು ಬೆಳಿಗ್ಗೆ 10.30ರಿಂದ ಮಧ್ಯಾಹ್ನ 1 ಗಂಟೆಯವರೆಗೆ ತಹಸೀಲ್ದಾರರ ಕಚೇರಿ ಸಭಾಭವನದಲ್ಲಿ ಲೋಕಾಯುಕ್ತ ಜನ ಸಂಪರ್ಕ ಸಭೆ ಮತ್ತು ಸಾರ್ವಜನಿಕರಿಂದ ಅಹವಾಲು ಸ್ವೀಕಾರ ಕಾರ್ಯಕ್ರಮ ಜರುಗುವುದು.

ಸಾರ್ವಜನಿಕರು ತಮ್ಮ ಕುಂದು-ಕೊರತೆಗಳನ್ನು, ಅಹವಾಲುಗಳನ್ನು ಹಾಗೂ ತಮ್ಮ ಸರಕಾರಿ ಕೆಲಸಗಳಿಗೆ ಸಂಬಂಧಿಸಿದಂತೆ ಸಾರ್ವಜನಿಕರ ಕೆಲಸ ಕಾರ್ಯಗಳನ್ನು ಮಾಡಿಕೊಡಲು ಅಧಿಕಾರಿಗಳು ಉದ್ದೇಶಪೂರ್ವಕವಾಗಿ ವಿಳಂಬ ಮಾಡುತ್ತಿರುವ ಬಗ್ಗೆ ಲಿಖಿತ ದೂರನ್ನು ದಾಖಲಿಸಬಹುದು. ಸರಕಾರಿ ಅಧಿಕಾರಿಗಳು ಸರಕಾರದ ಯೋಜನೆಗಳ ಲಾಭವನ್ನು ಅರ್ಹ ಫಲಾನುಭವಿಗಳಿಗೆ ತಲುಪಿಸುವಲ್ಲಿ ಉದ್ದೇಶಪೂರ್ವಕ ತಾರತಮ್ಯ ಮಾಡುತ್ತಿರುವ ಬಗ್ಗೆ ಲಿಖಿತ ದೂರನ್ನು ದಾಖಲಿಸಬಹುದಾಗಿದೆ.

ಸರಕಾರದ ಯೋಜನೆಗಳ ಅನುಷ್ಠಾನದಲ್ಲಿ ಅನಗತ್ಯ ವಿಳಂಬ, ಕಳಪೆ ಕಾಮಗಾರಿ ನಡೆಸಿ ಹಣ ದುರುಪಯೋಗಪಡಿಸಿದ ದೂರುಗಳ ಬಗ್ಗೆ ಹಾಗೂ ಸಾರ್ವಜನಿಕರ ಕೆಲಸ ಕಾರ್ಯಗಳನ್ನು ನಿಗದಿತ ಸಮಯದೊಳಗೆ ಮಾಡಿಕೊಡದೆ, ಅಕ್ರಮ ಸಂಭಾವನೆ (ಲಂಚದ ಹಣ)ಯ ಸಲುವಾಗಿ ಅನಗತ್ಯ ವಿಳಂಬ ಮಾಡುತ್ತಿದ್ದರೆ ಲಿಖಿತ ದೂರನ್ನು ದಾಖಲಿಸಬಹುದಾಗಿದೆ ಎಂದು ಕರ್ನಾಟಕ ಲೋಕಾಯುಕ್ತ ಗದಗ ಆರಕ್ಷಕ ಉಪ ಅಧೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ನೀರು ಪೂರೈಕೆಯಲ್ಲಿ ವ್ಯತ್ಯಯ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ಅವಳಿ ನಗರಕ್ಕೆ ಸಗಟು ನೀರು ಸರಬರಾಜು ಮಾಡುವ ಹಮ್ಮಿಗಿ ಜ್ಯಾಕ್‌ವೆಲ್‌ದಿಂದ ಡಂಬಳ ಮಧ್ಯಂತರ ಪಂಪಿಂಗ್ ಸ್ಟೇಷನ್‌ಗೆ ಬರುವ ಸಿಂಗಟಾಲೂರ ಹಿಂಭಾಗದಲ್ಲಿ ಮುಖ್ಯ ಕೊಳವೆ ಮಾರ್ಗಗಳ ದುರಸ್ತಿ ಕಾರ್ಯ ನಡೆದಿದ್ದು, ದುರಸ್ತಿ ಕಾರ್ಯ ಪೂರ್ಣಗೊಳ್ಳುವವರೆಗೂ ನೀರು ಪೂರೈಕೆಯಲ್ಲಿ ವ್ಯತ್ಯಯ ಉಂಟಾಗುವುದರಿಂದ ಸಾರ್ವಜನಿಕರು ನಗರಸಭೆಯೊಂದಿಗೆ ಸಹಕರಿಸಬೇಕು ಎಂದು ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಡಿ. 2024ರ ಅಂತ್ಯದವರೆಗೆ 7ಲಕ್ಷಕ್ಕೂ ಹೆಚ್ಚು ದಂಡ ವಸೂಲು

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲೆಯಲ್ಲಿ ಒಟ್ಟು ರೂ.76,74,857 ಸತ್ಯಾಪನೆ ಶುಲ್ಕ ಸಂಗ್ರಹಿಸಲಾಗಿದ್ದು, ಕಿರಾಣಿ ವ್ಯಾಪಾರಸ್ಥರು, ನ್ಯಾಯಬೆಲೆ ಅಂಗಡಿಗಳು, ಸೀಮೆಎಣ್ಣೆ ಸಗಟು ಮತ್ತು ಚಿಲ್ಲರೆ ವ್ಯಾಪಾರಸ್ಥರ ಹಾಗೂ ಇನ್ನಿತರ ಒಟ್ಟು 799 ಅಂಗಡಿಗಳ ತಪಾಸಣೆ ಮಾಡಿ ತಪ್ಪಿತಸ್ಥರ ವಿರುದ್ಧ ಒಟ್ಟು 255 ಮೊಕದ್ದಮೆಗಳನ್ನು ಹೂಡಲಾಗಿದೆ. ಈ ಮೊಕದ್ದಮೆಗಳನ್ನು ಸಂದಾನದ ಮೂಲಕ ಇತ್ಯರ್ಥ ಮಾಡಿ ಡಿಸೆಂಬರ್ 2024ರ ಅಂತ್ಯದವರೆಗೆ ಒಟ್ಟು ರೂ. 7,12,500 ಅಭಿಸಂಧಾನ ದಂಡದ ಶುಲ್ಕವನ್ನು ವಸೂಲು ಮಾಡಲಾಗಿದೆ.

**ಜ 19ರಿಂದ 21ರವರೆಗೆ ಜಿಲ್ಲಾ ಕನ್ನಡ ಸಾಹಿತ್ಯ ಸಮ್ಮೇಳನ । ಸರ್ವರೂ ಕೈಜೋಡಿಸಲು ಶಾಸಕ ಜಿ.ಎಸ್. ಪಾಟೀಲ ಕರೆ**

# ಮೂರು ದಿನಗಳ ಕಾಲ ಕನ್ನಡದ ಜಾತ್ರೆ

■ವಿಜಯಸಾಕ್ಷಿ ಸುದ್ದಿ, ರೋಣ

ಆನವರಿ 19ರಿಂದ ಮೂರು ದಿನಗಳ ಕಾಲ ಗಜೇಂದ್ರಗಡ ತಾಲೂಕಿನಲ್ಲಿ ಜರುಗುವ ಗದಗ ಜಿಲ್ಲಾ ಕನ್ನಡ ಸಾಹಿತ್ಯ ಸಮ್ಮೇಳವನ್ನು ಅತ್ಯಂತ ಸಂಭ್ರಮದಿಂದ, ಯಶಸ್ವಿಯಾಗಿ ನಡೆಸಬೇಕು ಎಂದು ರಾಜ್ಯ ಖನಿಜ ನಿಗಮದ ಅಧ್ಯಕ್ಷರು ಹಾಗೂ ಶಾಸಕರಾದ ಜಿ.ಎಸ್. ಪಾಟೀಲ ಹೇಳಿದರು.

ಅವರು ಸೋಮವಾರ ಪುರಸಭೆಯ ಸಭಾಂಗಣದಲ್ಲಿ ಎರಡು ತಾಲೂಕಿನ ತಾಲೂಕಾ ಮಟ್ಟದ ಅಧಿಕಾರಿಗಳ ಪೂರ್ವಭಾವಿ ಸಭೆಯ ಅಧ್ಯಕ್ಷತೆಯನ್ನು ವಹಿಸಿ ಮಾತನಾಡಿದರು.

> ರಾಜ್ಯ ಮಟ್ಟದ ಸಮ್ಮೇಳನದಂತೆ ಜಿಲ್ಲಾ ಕನ್ನಡ ಸಾಹಿತ್ಯ ಸಮ್ಮೇಳನ ನಡೆಯಬೇಕು. ಕನ್ನಡಾಭಿಮಾನಿಗಳಿಗೆ ತೊಂದರೆಯಾಗಬಾರದು. ಸಾಹಿತಿಗಳಿಗೆ, ಕವಿಗಳಿಗೆ, ವಿಚಾರ ಗೋಷ್ಠಿಗಳಿಗೆ ಹೆಚ್ಚಿನ ಮಹತ್ವ ನೀಡಬೇಕು. ಕನ್ನಡದ ಜಾತ್ರೆ ಅದ್ಧೂರಿಯಾಗಿ ಜರುಗಬೇಕು. ಈ ಕಾರ್ಯಕ್ರಮಕ್ಕೆ ನನ್ನ ಸಹಕಾರ ಇದ್ದೇ ಇದೆ.
>
> – ಜಿ.ಎಸ್. ಪಾಟೀಲ. ಶಾಸಕರು, ರೋಣ.



ಈ ಹಿಂದೆ ನಡೆಯಬೇಕಿದ್ದ ಸಮ್ಮೇಳನವನ್ನು ಅಬ್ಬಿಗೇರಿಯಲ್ಲಿ ಜರುಗಿದ ಧಾರ್ಮಿಕ ಸಮ್ಮೇಳನ ಮತ್ತು ಗಜೇಂದ್ರಗಡ ನಗರದಲ್ಲಿ ಜರುಗಿದ ಬಸವ ಪುರಾಣದ ನಿಮಿತ್ತ ಮುಂದೂಡಲಾಗಿತ್ತು. ಈಗ ಕನ್ನಡದ ಜಾತ್ರೆಗೆ ಕಾಲ ಕೂಡಿ ಬಂದಿದ್ದು, ಸಮ್ಮೇಳನದ ಯಶಸ್ವಿಗೆ ಅಧಿಕಾರಿಗಳು ಸೇರಿದಂತೆ ಎರಡೂ ತಾಲೂಕಿನ ನಾಗರಿಕ ಸಮುದಾಯ ಶ್ರಮಿಸಬೇಕು ಎಂದರು.

ಜ. 19ರಂದು ಕರ್ನಾಟಕ ಏಕೀರಣದ ರೂವಾರಿ ದಿ. ಅಂದಾನಪ್ಪ ದೊಡ್ಡಮೇಟಿಯವರ ಜಕ್ಕಲಿ ಗ್ರಾಮದಿಂದ ಕನ್ನಡ ತೇರಿನ ಮೇರವಣಿಗೆ ಸಾಗಬೇಕು. ಮಹನೀಯರುಗಳ ವಿಚಾರಾಧಾರೆಗಳನ್ನು ಇಂದಿನ ಪೀಳಿಗೆಗೆ ತಿಳಿಸುವ ಕಾರ್ಯ ನಡೆಯಬೇಕು. ಮುಖ್ಯವಾಗಿ ತೇರು ಸಾಗುವ ಮಾರ್ಗಗಳು ಸ್ವಚ್ಛತೆಯಿಂದ ಕೂಡಿರಬೇಕು. ಅಧಿಕಾರಿಗಳು, ಶಾಲಾ ಮಕ್ಕಳು, ಗ್ರಾಮಸ್ಥರು ಸೇರಿದಂತೆ ಕನ್ನಡಪರ ಸಂಘಟನೆಗಳು ಭಾಗಿಯಾಗಬೇಕು ಎಂದು ಅವರು ಕರೆ ನೀಡಿದರು.

ಮುಖಂಡರಾದ ವಿ.ಬಿ. ಸೋಮನಕಟ್ಟಿಮಠ ಮಾತನಾಡಿ, ಸ್ಥಳೀಯ ಮಹನೀಯರು ದೇಶಕ್ಕೆ, ನಾಡಿಗೆ ತಮ್ಮನ್ನು ತಾವು ಸಮರ್ಪಿಸಿಕೊಂಡಿದ್ದಾರೆ. ಅಂತಹ ಮಹನೀಯರನ್ನು ಗುರುತಿಸಿ ಅವರ ಹೆಸರುಗಳಿಂದ ವೇದಿಕೆ ನಿರ್ಮಿಸುವ ಕಾರ್ಯವನ್ನು ಕಸಾಪ ಮಾಡಬೇಕು. ನಮ್ಮ ಮಹನೀಯರು ಸಾರಿದ ವಿಚಾರಗಳನ್ನು ನಮ್ಮ ಮುಂದಿನ ಪೀಳಿಗೆಗೆ ತಿಳಿಸುವ ಕಾರ್ಯವಾಗಬೇಕು ಎಂದರು.

ಜಿಲ್ಲಾಧ್ಯಕ್ಷ ವೆಂಕನಗೌಡ ಪಾಟೀಲ, ತಾಲೂಕಾಧ್ಯಕ್ಷ ರಮಾಕಾಂತ ಕಮತಗಿ, ತಹಸೀಲ್ದಾರ್ ನಾಗರಾಜ ಕೆ, ಕಿರಣಕುಮಾರ ಕುಲಕರ್ಣಿ, ಸಿದ್ದಣ್ಣ ಬಂಡಿ, ಮುಖ್ಯಾಧಿಕಾರಿ ರಮೇಶ ಹೊಸಮನಿ, ತಾ.ಪಂ ಇಒ ಚಂದ್ರಶೇಖರ, ಮಂಜುಳಾ ಹಕಾರಿ, ವ್ಹಿ.ಬಿ. ಸೋಮನಕಟ್ಟಿಮಠ ಸೇರಿದಂತೆ ತಾಲೂಕಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

**ಕಪ್ಪತಗುಡ್ಡ ಸಂರಕ್ಷಿತ ಪ್ರದೇಶದಲ್ಲಿ ಬೆಂಕಿ ತಡೆಗೆ ಅರಣ್ಯ ಇಲಾಖೆಯಿಂದ ಫೈರ್ ಲೈನ್**

# ಬೆಂಕಿ ತಡೆಗೆ ಸರ್ವ ಸನ್ನದ್ಧ

■ವಿಜಯಸಾಕ್ಷಿ ಸುದ್ದಿ, ಡಂಬಳ

33 ಸಾವಿರ ಹೆಕ್ಟೇರ್ ವ್ಯಾಪ್ತಿಯಲ್ಲಿ ಹಬ್ಬಿರುವ ಸಸ್ಯ ಕಾಶಿ ಕಪ್ಪತ್ತಗುಡ್ಡ ಬೇಸಿಗೆಯ ಹಿನ್ನೆಲೆಯಲ್ಲಿ ಮುಂಡರಗಿ ತಾಲೂಕಿನ ಡಂಬಳ ಹೋಬಳಿ ವ್ಯಾಪ್ತಿಯಲ್ಲಿ ಬರುವ ಅರಣ್ಯ ಸಂರಕ್ಷಿತ ಪ್ರದೇಶದಲ್ಲಿ 150ಕ್ಕೂ ಹೆಚ್ಚು ಭಾಗಗಳಲ್ಲಿ ಫೈರ್ ಲೈನ್(ಬೆಂಕಿ ತಡೆಯುವ ರೇಖೆ) ನಿರ್ಮಿಸಿದ್ದು, ಬೆಂಕಿ ತಡೆಗೆ ಅರಣ್ಯ ಇಲಾಖೆ ಸರ್ವ ಸನ್ನದ್ಧವಾಗಿದೆ.

ಮುಂಡರಗಿ ತಾಲೂಕಿನ ಡಂಬಳ ಹೋಬಳಿ ವ್ಯಾಪ್ತಿಯ ಕಪ್ಪತ್ತಗುಡ್ಡದ ನಾಲ್ಕು ಶಾಖೆಗಳಾದ ಹಿರೇವಡ್ಡಟ್ಟಿ, ಡೋಣಿ, ಬಸಾಪೂರ, ಕಲಕೇರಿ ಭಾಗದ ಸಂರಕ್ಷಿತ ಪ್ರದೇಶ, ಸೂಕ್ಷ್ಮ ಪ್ರದೇಶಗಳಲ್ಲಿ ವಾಟರ್ ರಸ್ತೆಗಳಲ್ಲಿ ಬೆಂಕಿ ತಡೆಗೆ ಕಪ್ಪತ್ತಗುಡ್ಡದ 4 ಶಾಖೆಗಳಲ್ಲಿ ಫೈರ್ ಲೈನ್ ನಿರ್ಮಿಸಲಾಗುತ್ತಿದೆ. ಪ್ರಾಣಿಗಳು ವಾಸವಿರುವ ಜಾಗೆಗಳನ್ನು ಗುರುತಿಸಿ ಪ್ರಾಣಿಗಳ ಸಂರಕ್ಷಿತ ಪ್ರದೇಶಗಳಲ್ಲಿ, ಕಪ್ಪತ್ತಗುಡ್ಡ ಫ್ಯಾನ್‌ಗಳ ನಿರ್ವಹಣೆಗಾಗಿ ನಿರ್ಮಾಣವಾಗಿರುವ ರಸ್ತೆ ಪಕ್ಕದ ಅರಣ್ಯ ವಲಯದಲ್ಲಿ, ವಾಹನಗಳು ಸಂಚರಿಸುವ ಹಾಗೂ ಸೂಕ್ಷ್ಮ ಪ್ರದೇಶಗಳಲ್ಲಿನ ರಸ್ತೆಗಳಲ್ಲಿ ಬೆಂಕಿ ತಡೆಯುವ ರೇಖೆ ನಿರ್ಮಿಸಲಾಗಿದೆ ಎನ್ನುತ್ತಾರೆ ಅರಣ್ಯ ಇಲಾಖೆಯ ಸಿಬ್ಬಂದಿಗಳು.



ಆಕಸ್ಮಿಕವಾಗಿ ಅಥವಾ ಉದ್ದೇಶಪೂರ್ವಕವಾಗಿ ಉಂಟಾಗುವ ಬೆಂಕಿ ತಡೆಯಲು ನಿಗಾ ಇಡಲಾಗಿದ್ದು, ಕಪ್ಪತ್ತಗುಡ್ಡದ ಸುತ್ತಮುತ್ತಲಿನ ಗ್ರಾಮಗಳ ಜನರನ್ನು ವಿಶ್ವಾಸಕ್ಕೆ ತೆಗೆದುಕೊಳ್ಳುವುದು ಮತ್ತು ಪರಿಸರವಾದಿಗಳಿಂದ ಜಾಗೃತಿ ಕಾರ್ಯಕ್ರಮ ಹಮ್ಮಿಕೊಳ್ಳಲು ಇಲಾಖೆ ಮುಂದಾಗಿದೆ ಎಂದು ಮುಂಡರಗಿ ವಲಯದ ಆರ್.ಎಫ್.ಓ ಮಂಜುನಾಥ ಮೇಗಲಮನಿ ಮಾಹಿತಿ ನೀಡಿದರು.

ಬೆಂಕಿ ತಡೆ ಸಂಬಂಧ 150 ಭಾಗಗಳಲ್ಲಿ ಫೈರ್ ಲೈನ್ ಕಾರ್ಯ ನಡೆದಿದೆ. ಬೇಸಿಗೆ ಮುಗಿವ ತನಕ ಇಲಾಖೆ ಅಧಿಕಾರಿ, ಸಿಬ್ಬಂದಿ ಹಾಗೂ ಫೈರ್ ವಾಚರ್ ಹಗಲು-ರಾತ್ರಿ ಎನ್ನದೆ ಕೆಲಸ ಮಾಡಲು ಸನ್ನದ್ಧವಾಗಿದೆ. ಹಿರಿಯ ಅಧಿಕಾರಿಗಳ ಸಲಹೆ ಸೂಚನೆಯಂತೆ ಕಪ್ಪತ್ತಗುಡ್ಡಕ್ಕೆ ಬೆಂಕಿ ತಾಗದಂತೆ ಇಲಾಖೆ ಎಲ್ಲಾ ಮುಂಜಾಗೃತಾ ಕ್ರಮ ತೆಗೆದುಕೊಂಡಿದೆ. ಬೆಂಕಿ ಹಚ್ಚುವ ಕಿಡಿಗೇಡಿಗಳಿಗೆ ಕಾನೂನು ಕ್ರಮಕ್ಕೆ ಒಳಪಡಿಸಲಾಗುವುದು ಎನ್ನುತ್ತಾರೆ ಮುಂಡರಗಿ ತಾಲೂಕಾ ಅರಣ್ಯ ವಲಯ ಅಧಿಕಾರಿ ಮಂಜುನಾಥ ಮೇಗಲಮನಿ.

> ಕಪ್ಪತ್ತಗುಡ್ಡದ ಉಳಿವಿಗಾಗಿ ಅರಣ್ಯ ಇಲಾಖೆ ಮಾತ್ರ ಶ್ರಮಿಸಿದರೆ ಸಾಲದು. ಪರಿಸರದ ಸಂರಕ್ಷಣೆಯಲ್ಲಿ ಜನತೆಯ ಸಹಕಾರ, ಪರಿಸರವಾದಿಗಳ ಕಾಳಜಿಯೊಂದಿಗೆ ಆಮ್ಲಜನಕ ಸೃಷ್ಟಿಯ ಫ್ಯಾಕ್ಟರಿ, ಜನರ ಹೃದಯದಂತಿರುವ ಕಪ್ಪತ್ತಗುಡ್ಡದ ಸಸ್ಯ ಸಂಪತ್ತಿನ ಉಳಿವಿಗಾಗಿ ಎಲ್ಲರೂ ಕೈಜೋಡಿಸಬೇಕಾಗಿದೆ.
>
> – ಯರಿಸ್ವಾಮಿ ಪಿ.ಎಸ್. ತಹಸೀಲ್ದಾರರು, ಮುಂಡರಗಿ.

**ಬಸ್ ಪ್ರಯಾಣ ದರ ಏರಿಕೆ ವಿರೋಧಿಸಿ ಎಬಿವಿಪಿಯಿಂದ ಪ್ರತಿಭಟನೆ**

## ದರ ಏರಿಕೆಯಿಂದ ಸಾರ್ವಜನಿಕರಿಗೆ ಹೊರೆ




■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಕೆಎಸ್‌ಆರ್ಟಿಸಿ ಬಸ್ ಟಿಕೆಟ್ ದರವನ್ನು ಅವೈಜ್ಞಾನಿಕವಾಗಿ ಏರಿಸಿರುವುದನ್ನು ವಿರೋಧಿಸಿ ಸೋಮವಾರ ಪಟ್ಟಣದ ಕೆಎಸ್‌ಆರ್‌ಟಿಸಿ ಬಸ್ ನಿಲ್ದಾಣದ ಮುಂಭಾಗದಲ್ಲಿ ಅಖಿಲ ಭಾರತ ವಿದ್ಯಾರ್ಥಿ ಪರಿಷತ್ ಕಾರ್ಯಕರ್ತರು ಮಾನವ ಸರಪಳಿ ನಿರ್ಮಿಸಿ ಪ್ರತಿಭಟನೆ ನಡೆಸಿದರು.

ಈ ವೇಳೆ ರಾಜ್ಯ ಕಾರ್ಯಕಾರಿಣಿ ಸದಸ್ಯ ಅಭಿಷೇಕ ಉಮಚಗಿ ಮಾತನಾಡಿ, ರಾಜ್ಯ ಸರ್ಕಾರ ಏರಿಸಬೇಕಾಗಿದ್ದು ಬಸ್ ಟಿಕೇಟ್ ದರವನ್ನಲ್ಲ, ಬದಲಿಗೆ ಬಸ್‌ಗಳ ಸಂಖ್ಯೆಯನ್ನು. ಬಸ್ಸಿನ ಕೊರತೆಯಿಂದ ನಿತ್ಯ ವಿದ್ಯಾರ್ಥಿಗಳು ಸಾಕಷ್ಟು ತೊಂದರೆ ಅನುಭವಿಸುತ್ತಿದ್ದಾರೆ. ರಾಜ್ಯ ಸರ್ಕಾರ ಗ್ಯಾರಂಟಿ ಯೋಜನೆಯ ಹೆಸರಿನಲ್ಲಿ ಜನರನ್ನು ಸುಲಿಗೆ ಮಾಡುತ್ತಿದೆ. ವಿದ್ಯಾರ್ಥಿಗಳಿಗೆ ಸರಿಯಾದ ಬಸ್ ವ್ಯವಸ್ಥೆ ಇಲ್ಲ, ಸ್ಕಾಲರ್‌ಶಿಪ್ ಬಂದಿಲ್ಲ. ಇನ್ನೂ ಅನೇಕ ತೊಂದರೆಗಳನ್ನು ಸರಿಪಡಿಸಬೇಕಾಗಿದೆ. ಆದರೆ ಬಸ್ ಟಿಕೆಟ್ ದರ ಏರಿಸಿ ಜನರಿಗೆ ಹೊರೆ ಮಾಡುತ್ತಿದೆ.

ದರ ಏರಿಕೆಯನ್ನು ಸರ್ಕಾರ ಕೂಡಲೇ ಹಿಂಪಡೆಯಬೇಕು. ಇಲ್ಲವಾದಲ್ಲಿ ರಾಜ್ಯ ಅಖಿಲ ಭಾರತೀಯ ವಿದ್ಯಾರ್ಥಿ ಪರಿಷತ್‌ನಿಂದ ವಿಧಾನ ಸೌಧಕ್ಕೆ ಮುತ್ತಿಗೆ ಹಾಕಲು ಮುಂದಾಗಬೇಕಾಗುತ್ತದೆ ಎಂದು ಎಚ್ಚರಿಸಿದರು.

ಪ್ರತಿಭಟನೆಯ ಸ್ಥಳಕ್ಕೆ ಆಗಮಿಸಿದ ತಹಸೀಲ್ದಾರ ವಾಸುದೇವ ಸ್ವಾಮಿ ಮನವಿ ಸ್ವೀಕರಿಸಿ ಸರಕಾರಕ್ಕೆ ಮನವಿಯನ್ನು ಕಳಿಸುವದಾಗಿ ಹೇಳಿದರು. ಪ್ರತಿಭಟನೆಯಲ್ಲಿ ಪರಿಷತ್‌ನ ಪ್ರಮುಖರಾದ ಪ್ರಕಾಶ ಕುಂಬಾರ, ವಿನಯ್ ಸಪಡ್ಲ, ಅಭಿಷೇಕ ಉಮಚಗಿ, ಯಶವಂತ ಶಿರಹಟ್ಟಿ, ಮನೋಜ್ ತಂಡಗೇರ, ವಿನಾಯಕ ಕುಂಬಾರ, ಅಭಿಷೇಕ ಇಸನಗೌಡರ್, ವಿನಾಯಕ ಹುಂಬಿ, ಅರವಿಂದ ಇಚಾಂಗಿ, ಯುವರಾಜ ದುರ್ಗದ, ಈರಣ್ಣ ಕುಂಬಾರ, ಕಿರಣ ಗುಡಗೇರಿ ಸೇರಿದಂತೆ ಕಾರ್ಯಕರ್ತರು, ನೂರಾರು ವಿದ್ಯಾರ್ಥಿಗಳು ಭಾಗವಹಿಸಿದ್ದರು.

ಪ್ರತಿಭಟನೆಯಿಂದ ಕೆಲ ಹೊತ್ತು ಕೈಗಾ-ಇಳಕಲ್ ರಾಜ್ಯ ಹೆದ್ದಾರಿಯಲ್ಲಿ ಸಂಚಾರ ಸಮಸ್ಯೆ ಉಂಟಾಯಿತು. ಪಿಎಸ್‌ಐ ನಾಗರಾಜ ಗಡದ, ಅಪರಾಧ ವಿಭಾಗದ ಪಿಎಸ್‌ಐ ರಾಠೋಡ ನೇತೃತ್ವದಲ್ಲಿ ಬಿಗಿ ಬಂದೋಬಸ್ತ್ ಮಾಡಲಾಗಿತ್ತು.


**ರಾಷ್ಟ್ರೀಯ ಯುವ ದಿನಾಚರಣೆ ನಿಮಿತ್ತ ಕಬ್ಬಡ್ಡಿ ಪಂದ್ಯಾವಳಿ**

# ‘ಅಟಲ್ ಜಿ ಟ್ರೋಫಿ–2025’

■ವಿಜಯಸಾಕ್ಷಿ ಸುದ್ದಿ, ಗದಗ

ಭಾರತೀಯ ಜನತಾ ಪಾರ್ಟಿ ಗದಗ ಜಿಲ್ಲಾ ಯುವ ಮೋರ್ಚಾ ವತಿಯಿಂದ ಸ್ವಾಮಿ ವಿವೇಕಾನಂದರ ಜಯಂತ್ಯುತ್ಸವ (ರಾಷ್ಟ್ರೀಯ ಯುವ ದಿನಾಚರಣೆ) ಹಾಗೂ ಭಾರತದ ಹೆಮ್ಮೆಯ ಮಾಜಿ ಪ್ರಧಾನಿ ಅಟಲ್ ಬಿಹಾರಿ ವಾಜಪೇಯಿ ಅವರ ಜನ್ಮ ಶತಮಾನೋತ್ಸವದ ಪ್ರಯುಕ್ತ ಕಬ್ಬಡ್ಡಿ ಪಂದ್ಯಾವಳಿಯನ್ನು ನಗರದ ವಿಜಯ ಪಿಯು ಕಾಲೇಜಿನ ಆವರಣದಲ್ಲಿ ಜ. 8 ಮತ್ತು 9ರಂದು ಆಯೋಜಿಸಲಾಗಿದೆ.

ಕಾರ್ಯಕ್ರಮಕ್ಕೆ ಬಿಜೆಪಿ ಜಿಲ್ಲಾಧ್ಯಕ್ಷ ರಾಜು (ತೋಟಪ್ಪ) ಕುರಡಗಿ, ಮಾಜಿ ಸಚಿವ ಕಳಕಪ್ಪ ಬಂಡಿ, ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ ಆಗಮಿಸಲಿದ್ದಾರೆ.




ಈ ಕ್ರೀಡಾಕೂಟದಲ್ಲಿ ಪಾಲ್ಗೊಳ್ಳುವವರು ಗರಿಷ್ಠ ತೂಕ 60 ಕೆ.ಜಿ, ವಯೋಮಿತಿ 15ರಿಂದ 35 ವರ್ಷ ಇರಬೇಕು. ಯುವಕರಿಗೆ ಪ್ರಥಮ ಬಹುಮಾನವನ್ನು 10001 ರೂ, ದ್ವಿತೀಯ ಬಹುಮಾನ 7501 ರೂ, ತೃತೀಯ ಬಹುಮಾನ 5001 ಹಾಗೂ ಟ್ರೋಫಿಗಳನ್ನ ಕೊಡಲಾಗುವುದು.

ಯುವತಿಯರಿಗೂ ಅವಕಾಶ ನೀಡಿದ್ದು, ಗರಿಷ್ಠ ತೂಕ 55 ಕೆ.ಜಿ, ವಯೋಮಿತಿ 15ರಿಂದ 35 ವರ್ಷವಾಗಿದ್ದು, ಪ್ರಥಮ ಬಹುಮಾನ 7501 ರೂ, ದ್ವಿತೀಯ ಬಹುಮಾನ 5001 ರೂ, ತೃತೀಯ ಬಹುಮಾನ 2501 ಹಾಗೂ ಟ್ರೋಫಿಗಳನ್ನ ಕೊಡಲಾಗುವುದು. ಉತ್ತಮ ರೈಡರ್, ಉತ್ತಮ ಕ್ಯಾಚರ್ ಹಾಗೂ ಆಲ್ ರೌಂಡರ್ ಯುವಕ-ಯುವತಿಯರಿಗೆ ಆಕರ್ಷಿಕ ಬಹುಮಾನವನ್ನು ಕೊಡಲಾಗುವುದು. ಜ. 8ರ ಬೆಳಿಗ್ಗೆ 10 ಗಂಟೆಯ ಒಳಗಾಗಿ ತಂಡವನ್ನು ನೋಂದಾಯಿಸಿಕೊಳ್ಳಬೇಕು (ಶರತ್ತುಗಳು ಅನ್ವಯ)

ಜ.9ರಂದು ಸಮಾರೋಪ ಸಮಾರಂಭದಲ್ಲಿ ಸಂಸದ ಬಸವರಾಜ್ ಬೊಮ್ಮಾಯಿ, ಶಾಸಕರಾದ ಸಿ.ಸಿ. ಪಾಟೀಲ, ಡಾ. ಚಂದ್ರು ಲಮಾಣಿ ಭಾಗವಹಿಸಲಿದ್ದಾರೆ.

ಎಲ್ಲಾ ಕ್ರೀಡಾ ಪ್ರೇಮಿಗಳು ಕ್ರೀಡಾಕೂಟಕ್ಕೆ ಬಂದು ಪ್ರೋತ್ಸಾಹಿಸಬೇಕೆಂದು ಗದಗ ಜಿಲ್ಲಾ ಬಿಜೆಪಿ ಯುವ ಮೋರ್ಚಾ ಅಧ್ಯಕ್ಷ ಸಂತೋಷ ಅಕ್ಕಿ ತಿಳಿಸಿದ್ದಾರೆ. ಹೆಚ್ಚಿನ ಮಾಹಿತಿಗಾಗಿ ನವೀನ ಕುರ್ತ-ಕೋಟಿ–7483877256, ಸಚಿನ ಮಡಿವಾಳರ–8951430102 ಸಂಪರ್ಕಿಸಬಹುದಾಗಿದೆ.

## ಸಂಪಾದಕೀಯ

# ರಾಜಕಾರಣಿಗಳ ನಾಟಕ ಜನರಿಗೆ ಪೂರ್ಣಪ್ರಮಾಣದಲ್ಲಿ ಅರ್ಥವಾಗಿದೆ

ರಾಜ್ಯಾದ್ಯಂತ ಬಸ್ ಪ್ರಯಾಣ ದರ ಏರಿಕೆ ಬಿಸಿ ಈಗಾಗಲೇ ಜನರಿಗೆ ತಟ್ಟಿದೆ. ಶೇ. 15ರಷ್ಟು ಏಕಾಏಕಿ ದರ ಏರಿಕೆ ಮಾಡಿರುವುದರಿಂದ ಸಾಮಾನ್ಯ ವರ್ಗದ ಜನರಿಗೆ ಹೊರೆಯಾಗಿರುವುದು ನಿಜ. ಹೆಣ್ಣು ಮಕ್ಕಳಿಗೆ ಉಚಿತ ಪ್ರಯಾಣದ ಅವಕಾಶ ಕೊಟ್ಟು ರಾಜ್ಯದ ಮಹಿಳೆಯರಿಗೆ ಶಕ್ತಿ ಕೊಟ್ಟಿದ್ದ ಕಾಂಗ್ರೆಸ್ ಸರಕಾರ, ಪ್ರಯಾಣ ದರ ಏರಿಕೆ ಮಾಡಿ ಅದೇ ವರ್ಗದ ಪುರುಷರ ಶಕ್ತಿ ಕುಂದುವಂತೆ ಮಾಡಿರುವುದೂ ನಿಜ.

ಸಹಜವಾಗಿ ಪ್ರತಿಪಕ್ಷ ಬಿಜೆಪಿ ಬೀದಿಗಿಳಿದು ಪ್ರತಿಭಟನೆ ಮಾಡಿದೆ. ಒಂದು ಪ್ರತಿಪಕ್ಷವಾಗಿ ದಾಖಲಿಸಬೇಕಿದ್ದ ವಿರೋಧವನ್ನು ದಾಖಲಿಸಿದೆ. ಅದರಲ್ಲಿ ವಿಶೇಷ ಏನು ಇಲ್ಲ. ಈ ಪ್ರಯಾಣ ದರ ಏರಿಕೆ ಕುರಿತು ಒಂದು ಪ್ರತಿಭಟನೆ, ಪತ್ರಿಕಾಗೋಷ್ಠಿ ಮತ್ತು ಸರಕಾರದ ವಿರುದ್ಧ ಒಂದೆರಡು ಟೀಕೆಗೆ ಪ್ರತಿಪಕ್ಷದ ವಿರೋಧ ಸೀಮಿತವಾಗಿದೆ. ಈ ಮಧ್ಯೆ ಕೇಂದ್ರ ಸಚಿವ ಕುಮಾರಸ್ವಾಮಿ ಅವರು, ಬಸ್ ಪ್ರಯಾಣ ದರ ಏರಿಕೆಯನ್ನು ರಾಜ್ಯದ ಜನ ಒಂದೆರಡು ದಿನದಲ್ಲಿ ಮರೆತುಬಿಡುತ್ತಾರೆ ಎನ್ನುವ ಹೇಳಿಕೆ ಚಿಂತನೆಗೆ ಕಾರಣವಾಗಿದೆ.

ಹೌದು, ರಾಜ್ಯದ ಜನ ಒಂದೆರಡು ದಿನದಲ್ಲಿ ಹೊಸ ದರಕ್ಕೆ ಹೊಂದಿಕೊಳ್ಳುವುದು ಸಹಜ. ಕಾರಣ ಇಷ್ಟೆ, ಕಳೆದ 25–30 ವರ್ಷದಲ್ಲಿ ಆಡಳಿತ ನಡೆಸಿದ ಎಲ್ಲ ಪಕ್ಷಗಳು ಬಸ್ ಪ್ರಯಾಣ ದರ ಏರಿಕೆ ಮಾಡಿವೆ. ಕುಮಾರಸ್ವಾಮಿ ಮುಖ್ಯಮಂತ್ರಿಯಾಗಿದ್ದ ಸಂದರ್ಭದಲ್ಲಿಯೂ ಪ್ರಯಾಣ ದರ ಏರಿಕೆಯಾಗಿದೆ. ಬಸ್ ಪ್ರಯಾಣ ದರ ಏರಿಕೆಗೆ ಪಕ್ಷಭೇದ ಇಲ್ಲ. ಆದರೆ ಪ್ರತಿಪಕ್ಷಗಳ ಪ್ರತಿಭಟನೆ, ಜನರ ಆಕ್ರೋಶಕ್ಕೆ ಮಣಿದು ಯಾವುದೇ ಸರಕಾರವೂ ಪ್ರಯಾಣ ದರ ಏರಿಕೆಯನ್ನು ಕಡಿಮೆ ಮಾಡಿದ ಒಂದೇ ಒಂದು ಉದಾಹರಣೆ ಇಲ್ಲ.

ಆ ಕಾರಣಕ್ಕಾಗಿ ಇವತ್ತು ಜನ ಬೀದಿಗಿಳಿದು ಹೋರಾಟ ಮಾಡಬೇಕಾದ ಮನಸ್ಥಿತಿಯನ್ನು ಕಳೆದುಕೊಂಡಿದ್ದಾರೆ. ಒಂದು ವೇಳೆ ಜನ ಬೀದಿಗೆ ಇಳಿದರೆ ಅದನ್ನು ಪ್ರತಿಪಕ್ಷಗಳು ರಾಜಕೀಯ ದಾಳವಾಗಿ ಬಳಸಿಕೊಳ್ಳುತ್ತವೆ. ರಾಜಕಾರಣಿಗಳ ಈ ತಂತ್ರಗಾರಿಕೆಯನ್ನು ಜನ ಅರ್ಥ ಮಾಡಿಕೊಂಡಿದ್ದಾರೆ. ಹೀಗಾಗಿ ಜನ ಬೆಲೆ ಏರಿಕೆ ಮಾಡಿದಾಗ ಪ್ರತಿಭಟನೆ ಮಾಡುವುದನ್ನು ಬಿಟ್ಟು, ಸಮಯ ಬಂದಾಗ ಪಾಠ ಕಲಿಸುವ ಮನಸ್ಥಿತಿಗೆ ಬಂದಿದ್ದಾರೆ. ಇದು ರಾಜಕಾರಣಿಗಳಿಗೆ ಅರ್ಥವಾದರೆ ಸಾಕು.

**ಬೀದಿ ಬದಿ ವ್ಯಾಪಾರಸ್ಥರ ಸ್ಥಳಾಂತರ ವಿರೋಧಿಸಿ ಕಾರ್ಮಿಕ ಸಂಘಟನೆ (ಸಿಐಟಿಯು) ನೇತೃತ್ವದಲ್ಲಿ ಧರಣಿ**

# ಜೋಡು ರಸ್ತೆಯಲ್ಲಿ ಮಾರಾಟಕ್ಕೆ ಅವಕಾಶ ಕಲ್ಪಿಸಿ

■ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ

ಬೀದಿ ಬದಿ ವ್ಯಾಪಾರಸ್ಥರನ್ನು ಏಕಾಏಕಿ ನಗರದ ಜೋಡು ರಸ್ತೆಯಿಂದ ಒಕ್ಕಲೆಬ್ಬಿಸಿ ಬಯಲು ಜಾಗೆಗೆ ಸ್ಥಳಾಂತರ ಮಾಡಿರುವುದನ್ನು ವಿರೋಧಿಸಿ ಕಾರ್ಮಿಕ ಸಂಘಟನೆ (ಸಿಐಟಿಯು) ನೇತೃತ್ವದಲ್ಲಿ ಪಟ್ಟಣದ ಬೀದಿ ಬದಿ ವ್ಯಾಪಾರಸ್ಥರು ತಹಸೀಲ್ದಾರರ ಕಚೇರಿಯಿಂದ ಮೆರವಣಿಗೆ ಪ್ರಾರಂಭಿಸಿ ಸ್ಥಳೀಯ ಪುರಸಭೆ ಆಡಳಿತ, ಪೊಲೀಸ್ ಇಲಾಖೆ, ಹಾಗೂ ಶಾಸಕರ ವಿರುದ್ಧ ಘೋಷಣೆ ಕುಗುತ್ತಾ ಪುರಸಭೆ ಎದುರು ಅನಿರ್ದಿಷ್ಟಾವಧಿ ಧರಣಿ ನಡೆಸಿದರು.

ಈ ವೇಳೆ ಕಾರ್ಮಿಕ ಸಂಘಟನೆಯ ಮುಖಂಡ ಎಂ.ಎಸ್. ಹಡಪದ ಮಾತನಾಡಿ, ಬೀದಿ ಬದಿ ವ್ಯಾಪಾರಸ್ಥರ ಕಾಯ್ದೆ–2014 ಜಾರಿಗೊಳಿಸಿದ್ದು, ಆ ಕಾಯ್ದೆ ಪ್ರಕಾರ ಬೀದಿ ಬದಿ ವ್ಯಾಪಾರಸ್ಥರ ಸಂರಕ್ಷಣಾ ಹೊಣೆಗಾರಿಕೆ ಸ್ಥಳೀಯ ಪುರಸಭೆಯದ್ದಿದ್ದರೂ ಪ್ರಭಾವಿ ವ್ಯಕ್ತಿಗಳ ಮಾತು ಕೇಳಿ ಅವರ ಅಣತಿಯಂತೆ ಇಡೀ ಆಡಳಿತ ವ್ಯವಸ್ಥೆ ಜನ ವಿರೋಧಿಯಾಗಿ ನಡೆದುಕೊಳ್ಳುತ್ತಿದೆ ಎಂದು ಆರೋಪಿಸಿದರು.

ಸ್ಥಳೀಯ ಆಡಳಿತಕ್ಕೆ ತನ್ನದೇ ಆದ ಘನತೆ–ಗೌರವವಿದೆ. ಅದನ್ನು ಯಾರೋ ಎಲ್ಲಿಯೋ ಕುಳಿತು ಪಾಳೆಗಾರಿಕೆ ರೀತಿಯಲ್ಲಿ ವರ್ತಿಸುವುದು ತರವಲ್ಲ. ಅವರಿಗೆ ಆಡಳಿತ ಮಾಡುವುದಿದ್ದರೆ ಜನರಿಂದ ಆಯ್ಕೆಯಾಗಿ ಬಂದು ಆಡಳಿತ ನಡೆಸಲಿ. ಹೊರತಾಗಿ ಹಿಂದೆ ಕುಳಿತು, ರಾಜಕಾರಣ ಮಾಡುವುದನ್ನು ಕೈ ಬಿಡಲಿ ಎಂದರು.

ಈಗಾಲಾದರೂ ಶಾಸಕರು, ಪುರಸಭೆ, ಪೊಲೀಸ್ ಇಲಾಖೆ, ತಹಸೀಲ್ದಾರರನ್ನೊಳಗೊಂಡಂತೆ ಬೀದಿ ಬದಿಯ ವ್ಯಾಪಾರಸ್ಥರ ಸಂಕಷ್ಟ ಚರ್ಚಿಸಿ ತ್ವರಿತಗತಿಯಲ್ಲಿ ಪರಿಹಾರ ಸಮಸ್ಯೆ ಇತ್ಯರ್ಥಕ್ಕೆ ಮುಂದಾಗದಿದ್ದರೆ ಜನವರಿ 8ರಂದು ಗಜೇಂದ್ರಗಡ ನಗರವನ್ನು ಬಂದ್ ಮಾಡಿ ಹೋರಾಟದ ಸ್ವರೂಪವನ್ನು ತೀವ್ರಗೊಳಿಸುತ್ತೇವೆ ಎಂದು ಎಚ್ಚರಿಸಿದರು.

ಸ್ಥಳಕ್ಕೆ ಪುರಸಭೆಯ ಅಧಿಕಾರಿಗಳು, ಪುರಸಭೆಯ ಅಧ್ಯಕ್ಷರು, ವಿರೋಧ ಪಕ್ಷದ ನಾಯಕರು, ಪುರಸಭೆಯ ಸದಸ್ಯರು ಭೇಟಿ ನೀಡಿ, ಸಮಸ್ಯೆ ಬಗೆಹರಿಸಲು ಕಾಲಾವಕಾಶ ಕೇಳಿದಾಗ ಹೋರಾಟಗಾರರು ನಿರಾಕರಿಸಿದರು.

ಧರಣಿ ಸತ್ಯಾಗ್ರಹದಲ್ಲಿ ಸಂಘದ ಅಧ್ಯಕ್ಷ



ಪ್ರಧಾನ ಕಾರ್ಯದರ್ಶಿ ಪೀರು ರಾಠೋಡ ಮಾತನಾಡಿ, ಸ್ಥಳೀಯ ಪುರಸಭೆ ಜನರ ಪಾಲಿಗೆ ಇದ್ದೂ ಇಲ್ಲದಂತಾಗಿದೆ. ಅಧಿಕಾರಿಗಳು ಜನರ ಪರವಾಗಿ ಕೆಲಸ ಮಾಡಿ ಉಳ್ಳವರ ಪರ ಕೆಲಸ ಮಾಡುವುದನ್ನು ಕೈ ಬಿಡಲಿ. ಜನರ ಹಿತಕ್ಕಿಂತಲೂ ಪ್ರಭಾವಿ ರಾಜಕಾರಣಿಗಳ ಹಿತಾಸಕ್ತಿಯೇ ನಿಮಗೆ ಮುಖ್ಯವಾಗಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು

ಎಸ್.ಎ. ದಿಂಡವಾಡ, ಸಿಪಿಐಎಂ ಪಕ್ಷದ ಕಾರ್ಯದರ್ಶಿ ದಾವಲಸಾಬ ತಾಳಿಕೋಟಿ, ಜಿಲ್ಲಾ ಸಮಿತಿ ಸದಸ್ಯ ಮೆಹಬೂಬ್ ಹವಾಲ್ದಾರ್, ಗಣೇಶ್ ರಾಠೋಡ, ಚೆನ್ನಪ್ಪ ಗುಗಲೊತ್ತರ, ಶಿವಾಜಿ ಗಡ್ಡದ, ಮೆಹಬೂಬ್ ಮಾಲ್ದಾರ, ಕರಿಯಮ್ಮ ಗುರಿಕಾರ ಸೇರಿದಂತೆ ಇತರರು ಪಾಲ್ಗೊಂಡಿದ್ದರು.




# ವಿಶೇಷ ಮಕ್ಕಳ ಸರ್ವಾಂಗೀಣ ಅಭಿವೃದ್ಧಿಯಾಗಲಿ

■ವಿಜಯಸಾಕ್ಷಿ ಸುದ್ದಿ, ಗದಗ

ವಿಶೇಷ ಅಗತ್ಯಗಳುಳ್ಳ ಮಕ್ಕಳ ಶೈಕ್ಷಣಿಕ ಕಲಿಕಾ ಅಗತ್ಯತೆಗಳನ್ನು ಪೂರೈಸುವುದೇ ವಿಶೇಷ ಶಿಕ್ಷಣದ ಮೂಲ ಉದ್ದೇಶವಾಗಿದ್ದು, ಇಂತಹ ಮಕ್ಕಳ ಸರ್ವಾಂಗಿಣ ಅಭಿವೃದ್ಧಿಯೇ ನಮ್ಮೆಲ್ಲರ ಗುರಿಯಾಗಿರಲಿ ಎಂದು ಚಿಂತಕಿ ರಜನಿ ಪಾಟೀಲ ಹೇಳಿದರು.

ಅವರು ಗುರುವಾರ ಗದಗ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಾರ್ಯಾಲಯದಿಂದ ಸರ್ಕಾರಿ ಶಾಲೆ ನಂ.4ರ ಶಾಲಾ ಸಿದ್ಧತಾ ಕೇಂದ್ರದಲ್ಲಿ ಜರುಗಿದ ವಿಶೇಷ ಚೇತನ ಮಕ್ಕಳು ಹಾಗೂ 21 ನ್ಯೂನತೆಗಳ ಕುರಿತು ಪಾಲಕರಿಗೆ ಹಾಗೂ ಶಾಲಾ ಶಿಕ್ಷಕರಿಗೆ ಹಮ್ಮಿಕೊಂಡಿದ್ದ ಅರಿವು ಕಾರ್ಯಕ್ರಮದಲ್ಲಿ ಜಾಗೃತಿ ಕರಪತ್ರ ಉದ್ಘಾಟಿಸಿ ಅವರು ಮಾತನಾಡಿದರು.



ವಿಶೇಷ ಚೇತನ ಮಕ್ಕಳ ಬೆಳವಣಿಗೆಗೆ ಪೂರಕವಾದ ಪರಿಸರ ನಿರ್ಮಾಣ ಕಾರ್ಯ ನಡೆಯಬೇಕು. ಅರಿವಿನ ತೊಂದರೆಯುಳ್ಳ ಮಕ್ಕಳನ್ನು ಸಾಮಾನ್ಯ ಮಕ್ಕಳೊಂದಿಗೆ ಸೇರಿಸಿ ಕಲಿಕಾ ವಾತಾವರಣ ನಿರ್ಮಾಣ ಮಾಡುವ ಕಾರ್ಯ ನಿರಂತರ ನಡೆಯಲಿ ಎಂದರು.

ಅತಿಥಿಗಳಾಗಿ ಆಗಮಿಸಿದ್ದ ಗದಗ ಶಹರ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಕಾರ್ಯದರ್ಶಿ ಪ್ರಶಾಂತ ಕನಾಜ ಹಾಗೂ ಸಿದ್ಧಾರೂಢ ಕೆಳಗಿನಮನಿ ಮಾತನಾಡಿ, ಮಗುವಿನ ಬೆಳವಣಿಗೆಯಲ್ಲಿ ನಿರ್ದಿಷ್ಟ ಚಟುವಟಿಕೆಗಳಲ್ಲಿ ತನ್ಮಯತೆಯಿಂದ ತೊಡಗಿಸಕೊಳ್ಳುವುದು ಅತ್ಯಗತ್ಯ. ಆದರೆ ಹಲವಾರು ಕಾರಣಗಳಿಂದ ವಿಶೇಷ ಚೇತನ ಮಕ್ಕಳು ಹಿಂದೆ ಉಳಿಯುತ್ತಿದ್ದು, ಪಾಲಕರು ವಿಶೇಷ ಕಾಳಜಿ ವಹಿಸಬೇಕು ಎಂದರು.

ಸಂಪನ್ಮೂಲ ವ್ಯಕ್ತಿ ಕವಿತಾ ಬೇಲೇರಿ, ಅಧ್ಯಕ್ಷತೆ ವಹಿಸಿದ್ದ ಮುಖ್ಯೋಪಾಧ್ಯಾಯ ಎಂ.ಬಿ. ಗಾಣಿಗ, ಪಾಲಕರ ಪರವಾಗಿ ಮಂಜುಳಾ ಸುಂಕದ, ಗೀತಾ ಗೋಕಾವಿ, ಶಬಾನಾ ನದಾಫ, ನಸರೀನ ಕರಡಿ ಮಾತನಾಡಿದರು. ವೇದಿಕೆಯ ಮೇಲೆ ಮುಖ್ಯೋಪಾಧ್ಯಾಯೆ ಭಾರತಿ ಮಟ್ಟಿ, ಅಂಗನವಾಡಿ ಕಾರ್ಯಕರ್ತೆ ಕವಿತಾ ಹುಣಸಿಮರದ ಉಪಸ್ಥಿತರಿದ್ದರು.

ಸಿಂಚನಾ ಗೋಕಾವಿ ಪ್ರಾರ್ಥಿಸಿದರು. ಶಿಕ್ಷಕಿ ಸುನೀತಾ ತಿಮ್ಮನಗೌಡ್ರ ಸ್ವಾಗತಿಸಿದರು. ಕಟಗಿ ಪರಿಚಯಿಸಿದರು. ಶಶಿಧರ ಚಳಗೇರಿ ನಿರೂಪಿಸಿ ವಂದಿಸಿದರು. ಕಾರ್ಯಕ್ರಮದಲ್ಲಿ ಮಾಲನ್ ಹೊಸಳ್ಳಿ, ಪ್ರೇಮಾ ಅಂಗಡಿ, ಶ್ವೇತಾ ಪಾಟೀಲ, ಸಂಜನಾಬಾಯಿ ಟೀಕಾರೆ, ಗೀತಾ ಸವದತ್ತಿ, ನಾಸರಿನ್ ಮಕಾನದಾರ, ಅಂಜುಮಾ ತಹಸೀಲ್ದಾರ್ ಉಪಸ್ಥಿತರಿದ್ದರು.

# ಗುಣಮಟ್ಟದ ಆಹಾರದಿಂದ ಉತ್ತಮ ಆರೋಗ್ಯ

■ವಿಜಯಸಾಕ್ಷಿ ಸುದ್ದಿ, ಮುಳಗುಂದ

ಗುಣಮಟ್ಟದ ಆಹಾರ ಸೇವನೆಯಿಂದ ಉತ್ತಮ ಆರೋಗ್ಯ ಹೊಂದಲು ಸಹಕಾರಿಯಾಗುತ್ತದೆ ಎಂದು ರಾಜೇಶ್ವರಿ ಬಡ್ನಿ ಹೇಳಿದರು.

ಅವರು ಪಟ್ಟಣದ ಸರಕಾರಿ ಮಾದರಿ ಕನ್ನಡ ಗಂಡು ಮಕ್ಕಳ ಶಾಲೆ ನಂ.1ರ ಮಕ್ಕಳು ಹೊರ ಸಂಚಾರಕ್ಕಾಗಿ ರಾಜೇಶ್ವರಿ ಗಾಣದ ಎಣ್ಣೆ ಕೇಂದ್ರಕ್ಕೆ ಭೇಟಿ ನೀಡಿದ ಸಂದರ್ಭದಲ್ಲಿ ಗಾಣದ ಎಣ್ಣೆಯ ಮಹತ್ವ ವಿವರಿಸಿ ಮಾತನಾಡಿದರು.

ಹಸಿವು ನೀಗಲೆಂಬ ಕಾರಣಕ್ಕಾಗಿ ಆಹಾರ ಸೇವಿಸುವ ಬದಲು ಉತ್ತಮ ಆರೋಗ್ಯ ಹೊಂದಲು ಉತ್ತಮ ಆಹಾರ ಸೇವನೆ ಮಾಡಬೇಕು. ಈ ವಿಚಾರದಲ್ಲಿ ಪ್ರತಿಯೊಬ್ಬರೂ ಕಾಳಜಿ ವಹಿಸಬೇಕು. ಹಿಂದಿನ ಕಾಲದಲ್ಲಿ



ಪ್ರತಿಯೊಬ್ಬರೂ ಮನೆಯಲ್ಲಿ ತಯಾರಿಸಿದ ಆಹಾರಕ್ಕೆ ಹೆಚ್ಚು ಒತ್ತು ಕೊಟ್ಟು ಆಹಾರ ಸೇವನೆಯಿಂದ ಉತ್ತಮ ಆರೋಗ್ಯ ಹೊಂದಿದ್ದರು. ಆಧುನಿಕತೆ ಬೆಳೆದಂತೆ ಇಂದು ಮನೆಯ ಆಹಾರ ಬಿಟ್ಟು ಹೊರಗಡೆ ತಯಾರಿಸುವ ಆಹಾರಕ್ಕೆ ಮಾರು ಹೋಗಿ ನಮ್ಮ ಆರೋಗ್ಯವನ್ನು ನಾವು ಹಾಳುಮಾಡಿಕೊಳ್ಳುತ್ತಿದ್ದೇವೆ ಎಂದರು.

ಶಿಕ್ಷಕಿ ವೀಣಾ ಕಂಠಿ ಮಾತನಾಡಿ ಮಕ್ಕಳ ಶೈಕ್ಷಣಿಕ ಅಭಿವೃದ್ಧಿಗಾಗಿ ಶಾಲಾ ಮಕ್ಕಳ ಹೊರ ಸಂಚಾರ ಸಹಕಾರಿಯಾಗಿದ್ದು, ಶುದ್ಧ ಗಾಣದ ಎಣ್ಣೆಯ ನಿತ್ಯ ಬಳಕೆಯಿಂದ ಉತ್ತಮ ಆರೋಗ್ಯ ಹೊಂದಲು ಸಹಕಾರಿಯಾಗುತ್ತದೆ ಎಂದರು.

ಸಿಆರ್‌ಪಿ ಎಂ.ಎಂ. ನಿಂಬನಾಯ್ಕರ, ಎಂ.ಎಂ. ಮೇಗಲಮನಿ, ಎಸ್.ಡಿ. ಪಂಡಿತ, ವಿ.ಡಿ. ಸಿದ್ದನಗೌಡರ ಇದ್ದರು.

# ಶ್ರೀ ಗೌರಿ ಗಣೇಶ ಶಿಕ್ಷಣ ಸಂಸ್ಥೆಯ ವಾರ್ಷಿಕೋತ್ಸವ

■ವಿಜಯಸಾಕ್ಷಿ ಸುದ್ದಿ, ಬೆಟಗೇರಿ

ಇಲ್ಲಿನ ಹುಯಿಲಗೋಳ ರಸ್ತೆಯ ಗೌರಿಗುಡಿ ಓಣಿಯಲ್ಲಿರುವ ಶ್ರೀ ಗೌರಿ ಗಣೇಶ ಶಿಕ್ಷಣ ಸಂಸ್ಥೆಯ 14ನೇ ವಾರ್ಷಿಕ ಸ್ನೇಹ ಸಮ್ಮೇಳನ ಮತ್ತು ಪಾರಿತೋಷಕ ವಿತರಣಾ ಕಾರ್ಯಕ್ರಮವು ಶ್ರೀ ವೆಂಕಟೇಶ್ವರ ಕಲ್ಯಾಣ ಮಂಟಪದಲ್ಲಿ ನಡೆಯಿತು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಪ್ರಕಾಶ ಮ್ಯಾಗೇರಿ ವಹಿಸಿದ್ದರು. ಮುಖ್ಯ ಅತಿಥಿಗಳಾಗಿ ಗಂಗಾಧರ ಹಿರೇಮಠ, ಗಂಗಣ್ಣ ಮಲ್ಲಾಡದ, ಭರತ ಕಂಭಂ, ವಿರೂಪಾಕ್ಷಪ್ಪ ಹರ್ಲಾಪೂರ, ರವಿ ಕುಂದಗೋಳ, ಮಂಜುನಾಥ ಬೆಂತೂರ ಮತ್ತು ಸಾವಿತ್ರಿ ಗೋಡಿ ಪಾಲ್ಗೊಂಡಿದ್ದರು.



ಮಲ್ಲಿಕಾರ್ಜುನ ಐಲಿ, ರಾಜು ಹುನಕುಂಟಿ, ನಗರಸಭೆಯ ಸದಸ್ಯರಾದ ಶಕುಂತಲಾ ಅಕ್ಕಿ, ಮಹೇಶ ಕರಬಿಷ್ಠಿ ಮಾತನಾಡಿದರು. ಬಸವರಾಜ ಕುಂದಗೋಳ ಸ್ವಾಗತಿಸಿದರು. ಸತೀಶ ಕುಂದಗೋಳ, ಶ್ರೀನಿವಾಸ ಹಡಪದ ಕಾರ್ಯಕ್ರಮ ನಿರೂಪಿಸಿದರು. ಶಿವಣ್ಣ ನಾಗರಾಳ ವಂದಿಸಿದರು.

# ರವಿ ಬಸ್ರೂರರಿಗೆ 'ಶ್ರೀ ಸಿದ್ಧಶ್ರೀ' ರಾಷ್ಟ್ರೀಯ ಪ್ರಶಸ್ತಿ

■ವಿಜಯಸಾಕ್ಷಿ ಸುದ್ದಿ, ಇಲಕಲ್

ತಾಲೂಕಿನ ಸುಕ್ಷೇತ್ರ ಶ್ರೀ ಸಿದ್ದನಕೊಳ್ಳದ ಜಾತ್ರಾ ವಿಶೇಷವಾಗಿ, 'ಶ್ರೀ ಸಿದ್ಧಶ್ರೀ' ರಾಷ್ಟ್ರೀಯ ಉತ್ಸವ ಹಾಗೂ ಅಂತಾರಾಷ್ಟ್ರೀಯ ಚಲನಚಿತ್ರೋತ್ಸವ–2025ರ ಪ್ರಶಸ್ತಿಯ ಜೊತೆಗೆ ಹೊಸದಾಗಿ ಈ ವರ್ಷ ರಾಜ್ಯ ಚಲನಚಿತ್ರ ಪ್ರಶಸ್ತಿಯನ್ನು ನೀಡಲಾಗುವುದೆಂದು ಡಾ. ಶ್ರೀ ಶಿವಕುಮಾರ ಮಹಾಸ್ವಾಮಿಗಳು ಹೇಳಿದರು.

ಅವರು ಸಿದ್ದನಕೊಳ್ಳದಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿ, ಜ. 14 ಮತ್ತು 15ರಂದು ಎರಡು ದಿನಗಳ ಕಾಲ ಶ್ರೀ ಸಿದ್ದನಕೊಳ್ಳದಲ್ಲಿ ಸಿದ್ಧಶ್ರೀ ರಾಷ್ಟ್ರೀಯ ಉತ್ಸವ ಹಾಗೂ ಅಚಿತಾರಾಷ್ಟ್ರೀಯ




ಚಲನಚಿತ್ರೋತ್ಸವ ಅದ್ದೂರಿಯಾಗಿ ನಡೆಯಲಿದೆ. ಪ್ರತಿವರ್ಷದಂತೆ ಈ ವರ್ಷವೂ ಸಿದ್ಧಶ್ರೀ ರಾಷ್ಟ್ರೀಯ ಪ್ರಶಸ್ತಿಯನ್ನು ಹಾಗೂ ರಾಜ್ಯ ಪ್ರಶಸ್ತಿಯನ್ನು ಕೊಡಲಾಗುವುದು. ಕಳೆದ ವರ್ಷ ಚಲನಚಿತ್ರ ಖ್ಯಾತ ನಟ ಶೋಭರಾಜ ಅವರಿಗೆ ನೀಡಲಾಗಿತ್ತು. ಈ ಸಲದ ರಾಷ್ಟ್ರೀಯ ಪ್ರಶಸ್ತಿಯನ್ನು ಕೆ.ಜಿ.ಎಫ್ ಖ್ಯಾತಿಯ ಚಲನಚಿತ್ರ ಸಂಗೀತ ನಿರ್ದೇಶಕ ರವಿ ಬಸರೂರ ಅವರಿಗೆ, ರಾಜ್ಯ ಪ್ರಶಸ್ತಿಯನ್ನು ಖ್ಯಾತ ಚಲನಚಿತ್ರ ಸಾಹಿತಿ, ನಿರ್ದೇಶಕ ಕೊಪ್ಪಳ ಜಿಲ್ಲೆಯ ಕಿನ್ನಾಳರಾಜು ಅವರಿಗೆ ನೀಡಲಾಗುವುದು. ಉತ್ತಮ ಕಲಾವಿದೆ ಪ್ರಶಸ್ತಿಯನ್ನು ಚಲನಚಿತ್ರ, ಕಿರುತೆರೆ ಕಲಾವಿದೆ ಸುನಂದಾ ಕಲಬುರ್ಗಿ ಅವರಿಗೆ ನೀಡಲಾಗುತ್ತಿದ್ದು, ಈ ಜಾತ್ರಾ ಮಹೋತ್ಸವಕ್ಕೆ ಮಠದ ಭಕ್ತಾದಿಗಳು ಆಗಮಿಸಬೇಕು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಸಂಗಣ್ಣ ತುರಡಗೇರಿ, ಸಂಗಮೇಶ ಹುದ್ದಾರ, ಡಾ. ಪ್ರಭು ಗಂಜಿಹಾಳ, ಹುಲ್ಲಪ್ಪ ಹಳ್ಳೂರ, ಹನುಮಂತ ಬಂಡಿ, ವೀರೂ ಐಹೊಳೆ, ಸಂಗನಗೌಡ ಕುರುಡಗಿ, ಜಯಕರ್ನಾಟಕ ರಕ್ಷಣಾ ಸೇನೆ ಜಿಲ್ಲಾಧ್ಯಕ್ಷ ಮಹೇಶ ವಡ್ಡರ ಮತ್ತಿತರರು ಉಪಸ್ಥಿತರಿದ್ದರು.

**ರಾಜ್ಯದಲ್ಲಿ ತಾಯಂದಿರ ಆರೋಗ್ಯ ಕಾಪಾಡದ ಬೇಜವಾಬ್ದಾರಿ ಸರ್ಕಾರ ಇದೆ: ಬಸವರಾಜ ಬೊಮ್ಮಾಯಿ**

# ತುರ್ತು ಔಷಧಿ ಖರೀದಿಗೂ ಹಣವಿಲ್ಲ

■ವಿಜಯಸಾಕ್ಷಿ ಸುದ್ದಿ, ಹಾವೇರಿ

ರಾಜ್ಯದಲ್ಲಿ ಗರ್ಭಿಣಿಯರು ಮತ್ತು ತಾಯಂದಿರ ಆರೋಗ್ಯ ಕಾಪಾಡಲೂ ಆಗದ ಬೇಜವಾಬ್ದಾರಿ ಸರ್ಕಾರ ಇದ್ದು, ತನ್ನ ಪ್ರಥಮ ಕರ್ತವ್ಯ ನಿರ್ವಹಣೆ ಮಾಡುವಲ್ಲಿ ವಿಫಲವಾಗಿದೆ ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ಆರೋಪಿಸಿದ್ದಾರೆ.

ಹಾವೇರಿಯಲ್ಲಿ ಜನ ಸಂಪರ್ಕ ಸಭೆ ನಂತರ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಮಾನವ ಅಭಿವೃದ್ಧಿ ಸೂಚ್ಯಾಂಕ ಮೊದಲಿನಿಂದಲೂ ಬಹಳಷ್ಟು ಪ್ರಮುಖವಾಗಿದ್ದು. ತಾಯಂದಿರ ಮರಣ ಪ್ರಮಾಣ ಮೊದಲು ಹಿಂದುಳಿದ ಎರಡು ಜಿಲ್ಲೆಯಲ್ಲಿ ಮಾತ್ರ ಇತ್ತು.

ರಾಯಚೂರು ಮತ್ತು ಯಾದಗಿರಿಯಲ್ಲಿ ಮಾತ್ರ ಹೆಚ್ಚಿಗೆ ಇತ್ತು. ಅದರೆ ಇಂದಿನ ಸರ್ಕಾರದಲ್ಲಿ ಆರೋಗ್ಯ



ನಿರ್ವಹಣೆಯಲ್ಲಿ ಎಡವಿದ್ದರಿಂದ ಪೂರ್ವಭಾವಿ ಕಾಳಜಿ ವಹಿಸದೇ ಇದ್ದಿದ್ದರಿಂದ ತೊಂದರೆ ಆಗುತ್ತಿದೆ. ಜೊತೆಗೆ ಔಷಧೀಯ ಖರೀದಿಯ ನೀತಿಯಲ್ಲಿ ದೋಷ ಇದ್ದು, ಬಹಳ ಭ್ರಷ್ಟಾಚಾರ ಆಗುತ್ತಿದೆ. ಅಗ್ಗದ ದರದಲ್ಲಿ ಔಷಧೀಯ ಖರೀದಿ ಮಾಡಲಾಗುತ್ತಿದೆ. ಜೊತೆಗೆ ಲಾಂಗ್ ಟರ್ಮ್ ಔಷಧಿ ಖರೀದಿ ಮಾಡುತ್ತಿಲ್ಲ.

ಲಾಂಗ ಟರ್ಮ್ ಔಷಧೀಯ ತೆಗೆದುಕೊಳ್ಳುವ ಪದ್ಧತಿ ಬಿಟ್ಟು, ಈಗ ಪ್ರತಿ ತಿಂಗಳು ಔಷಧಿ ಖರೀದಿ ಮಾಡುತ್ತಿದ್ದಾರೆ. ಹೀಗಾಗಿ ಗುಣಮಟ್ಟ ಪರೀಕ್ಷೆ ಮಾಡಲು ಅವಕಾಶ ಸಿಗುವುದಿಲ್ಲ.

ಗುಣಮಟ್ಟ ಇಲ್ಲದ ಔಷಧಿ ಕೊಟ್ಟಿದ್ದರಿಂದ ಬಾಣಂತಿಯರ ಸಾವಿನಂತಹ ಸಮಸ್ಯೆ ಆಗುತ್ತಿವೆ ಎಂದರು.

## ತನಿಖೆ ಆಗಬೇಕು

ಬಳ್ಳಾರಿಯಲ್ಲಿ ಬಾಣಂತಿಯರ ಸಾವಿನ ಪ್ರಕರಣ ನಡೆದು ಒಂದು ತಿಂಗಳು ಕಳೆದರೂ ತನಿಖೆ ವರದಿ ಏನಾಗಿದೆ ಅನ್ನೋದು ಗೊತ್ತಿಲ್ಲ. ಬೆಳಗಾವಿ, ಬಳ್ಳಾರಿ, ರಾಯಚೂರಿನಲ್ಲಿ ಮತ್ತೆ ಗರ್ಭಿಣಿಯರ ಸಾವು ಆಗಿದೆ. ಬೇಜವಾಬ್ದಾರಿಯುತ ಸರ್ಕಾರಕ್ಕೆ ಗರ್ಭಿಣಿಯರ ಮತ್ತು ತಾಯಿಂದರ ಆರೋಗ್ಯವನ್ನ ನೋಡಲು ಆಗುತ್ತಿಲ್ಲ. ತನ್ನ ಪ್ರಥಮ ಕರ್ತವ್ಯವನ್ನು ನಿರ್ವಹಣೆ ಮಾಡುವಲ್ಲಿ ವಿಫಲವಾಗಿದೆ. ಬೇಜವ್ದಾರಿಯಿಂದ ಅಧಿಕಾರ ನಡೆಸುತ್ತಿದೆ ಎಂದು ಆರೋಪಿಸಿದರು. ಹಾವೇರಿ ಜಿಲ್ಲೆಯಲ್ಲಿ ಬಾಣಂತಿಯರು ಹೊರ ಜಿಲ್ಲೆಗೆ ಹೋಗುವ ಪರಸ್ಥಿತಿ ಜಿಲ್ಲಾಸ್ಪತ್ರೆಯಲ್ಲಿ ಇದೆ. ಇಲ್ಲಿನ ಬಾಣಂತಿಯರು ದಾವಣಗೆರೆ , ಹುಬ್ಬಳ್ಳಿ ಹೋಗುತ್ತಾರೆ ಇದಕ್ಕೆ ರಾಜ್ಯ ಮಟ್ಟದಲ್ಲಿ ಕಾಯಕಲ್ಪ ನೀಡಬೇಕು. ಇದು ಗಂಭೀರವಾದ ವಿಚಾರ. ಆದರೆ, ಗಂಭೀರತೆ ಈ ಸರ್ಕಾರದಲ್ಲಿ ಕಾಣುತ್ತಿಲ್ಲ. ಈ ಸರ್ಕಾರದಲ್ಲಿ ತುರ್ತುಯಾಗಿ ಬೇಕಾದ ಔಷಧಿ ಖರೀದಿ ಮಾಡಲು ಹಣ ಇಲ್ಲ. ಮೊನ್ನೆ ಹುಬ್ಬಳ್ಳಿಯಲ್ಲಿ ಅಯ್ಯಪ್ಪ ಮಾಲಾಧಾರಿಗಳಿಗೆ ಸುಟ್ಟ ಗಾಯವಾದರೆ, ಬರ್ನಲ್ ಇರಲಿಲ್ಲ. ಇಂತಹ ಪರಿಸ್ಥಿತಿ ಕರ್ನಾಟಕಕ್ಕೆ ಯಾವತ್ತೂ ಬಂದಿರಲಿಲ್ಲ. ರಾಜ್ಯ ಸರ್ಕಾರ ಆರ್ಥಿಕವಾಗಿ ದಿವಾಳಿಯಾಗಿದೆ. ಭ್ರಷ್ಟಾಚಾರ ತಾಂಡವಾಡುತ್ತಿದೆ ಎಂದು ವಾಗ್ದಾಳಿ ನಡೆಸಿದರು. ಇದೇ ವೇಳೆ, ಹಾವೇರಿಯಲ್ಲಿ ವಂದೇ ಭಾರತ್ ರೈಲು ನಿಲುಗಡೆ ಕುರಿತು ಕೇಳಿದ ಪ್ರಶ್ನೆಗೆ ಪ್ರತಿಕ್ರಿಯಿಸಿದ ಅವರು, ಈ ಕುರಿತು ರೈಲ್ವೆ ಸಚಿವರ ಜೊತೆ ಮಾತನಾಡಿದ್ದೇನೆ. ರೈಲ್ವೆ ಮಂಡಳಿಯ ಸಭೆಯಲ್ಲಿ ಚರ್ಚಿಸಿ ತೀರ್ಮಾನ ತೆಗೆದುಕೊಳ್ಳುತ್ತಾರೆ ಎಂದು ಹೇಳಿದರು.

# ಮಕ್ಕಳ ಹಕ್ಕುಗಳ ರಕ್ಷಣೆ ನಮ್ಮೆಲ್ಲರ ಹೊಣೆ




■ವಿಜಯಸಾಕ್ಷಿ ಸುದ್ದಿ, ಗದಗ

ಮಕ್ಕಳ ಹಕ್ಕುಗಳ ರಕ್ಷಣೆ ನಮ್ಮೆಲ್ಲರ ಹೊಣೆಯಾಗಿದ್ದು, ಪ್ರತಿಯೊಂದು ಮಗುವಿಗೂ ಶಿಕ್ಷಣ ನೀಡಿ ಅವರ ಸರ್ವತೋಮುಖ ಬೆಳವಣಿಗೆಗೆ ಸಹಕರಿಸಬೇಕು ಎಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳು ಹಾಗೂ ಗದಗ ಜಿಲ್ಲಾ ಹಿರಿಯ ದಿವಾಣಿ ನ್ಯಾಯಾಧೀಶರಾದ ಸಿ.ಎಸ್. ಶಿವನಗೌಡರ ಹೇಳಿದರು.

ಅವರು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಕಚೇರಿಯಲ್ಲಿ ಕಾನೂನು ಸಾಕ್ಷರ ಸಂವಾದದಲ್ಲಿ ಭಾಗವಹಿಸಿದ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆ ಅಡವಿಸೋಮಾಪೂರ ಸಣ್ಣ ತಾಂಡೆ ಶಾಲೆಯ 5ನೇ ತರಗತಿಯ ಮಕ್ಕಳೊಂದಿಗೆ ಸಂವಾದದಲ್ಲಿ ಮಾತನಾಡುತ್ತಾ, ಪ್ರತಿಯೊಂದು ಮಗುವಿಗೂ ಜನ್ಮ ಹೊಂದುವ, ಜೀವಿಸುವ, ಉತ್ತಮ ಆರೋಗ್ಯ ಸೇವೆ, ಪೌಷ್ಟಿಕ ಆಹಾರ ಪಡೆದು ದೇಶದ ಪ್ರಜೆ ಎಂದು ಗುರುತಿಸಿಕೊಂಡು ಬದುಕುವ ಹಕ್ಕಿದೆ. ಉಚಿತ ಮತ್ತು ಕಡ್ಡಾಯ ಶಿಕ್ಷಣ ಪಡೆಯುವುದು ಸಾಂವಿಧಾನಿಕ ಮೂಲಭೂತ ಹಕ್ಕಾಗಿದೆ, ಅದರಂತೆ ಶಿಕ್ಷಣ ಪಡೆದು ವಿಕಾಸ ಹೊಂದುವ ಹಕ್ಕಿದೆ ಎಂದರು.

ಶಾಲಾ ಮುಖ್ಯ ಶಿಕ್ಷಕ ಮಲ್ಲೇಶ ಡಿ.ಎಚ್, ವಕೀಲರಾದ ಎಂ.ಬಿ. ಮತ್ತೂರು, ಶಿರಸ್ತೇದಾರ್ ಬಿ.ಎಂ. ಕುಕನೂರು, ಶಿಕ್ಷಕರಾದ ಎಸ್.ಜಿ. ಅಮ್ಮಿನಭಾವಿ, ಎಸ್.ಟಿ. ಹಳಕಟ್ಟಿ, ಪಿ.ಬಿ. ಕಿಲಬನವರ, ಶಾಲಾ ಮಕ್ಕಳು ಇದ್ದರು.

### ಜಿಲ್ಲಾ ಕೆಪಿಟಿಸಿಎಲ್, ಹೆಸ್ಕಾಂ ವೀರಶೈವ ಲಿಂಗಾಯತ ನೌಕರರ ಸಂಘದ ತೂಗು ಪಂಚಾಂಗ ಬಿಡುಗಡೆ

# ಸಂಘಟನೆಯ ಮೂಲಕ ಸಮಾಜ ಸದೃಢವಾಗಲಿ

■ವಿಜಯಸಾಕ್ಷಿ ಸುದ್ದಿ, ಗದಗ

ಕೆಪಿಟಿಸಿಎಲ್ ಹಾಗೂ ಹೆಸ್ಕಾಂ ವೀರಶೈವ ಲಿಂಗಾಯತ ನೌಕರರ ಕುಟುಂಬದವರನ್ನು ಒಂದುಗೂಡಿಸಿ ಸಮಾಜ ಹಾಗೂ ಸಂಘಟನೆಯನ್ನು ಬಲಿಷ್ಠಗೊಳಿಸುವದು ಈ ಕಾರ್ಯಕ್ರಮದ ಉದ್ದೇಶವಾಗಿದೆ ಎಂದು ಕೆಪಿಟಿಸಿಎಲ್ ಹಾಗೂ ಹೆಸ್ಕಾಂ ವೀರಶೈವ ಲಿಂಗಾಯತ ನೌಕರರ ಸಂಘದ ಅಧ್ಯಕ್ಷರು ಹಾಗೂ ಕಾರ್ಯನಿರ್ವಾಹಕ ಅಭಿಯಂತರರಾದ ರಾಜೇಶ ಕಲ್ಯಾಣಶೆಟ್ಟರ ಹೇಳಿದರು.

ನಗರದ ಪಂ. ಭೀಮಸೇನ್ ಜೋಶಿ ರಂಗ ಮಂದಿರದಲ್ಲಿ ಕೆಪಿಟಿಸಿಎಲ್ ಹಾಗೂ ಹೆಸ್ಕಾಂ ವೀರಶೈವ ಲಿಂಗಾಯತ ನೌಕರರ ಸಂಘದ 2025ನೇ ಸಾಲಿನ ತೂಗು ಪಂಚಾಂಗ ಬಿಡುಗಡೆ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಕೆಲಸ-ಕಾರ್ಯದಲ್ಲಿ ತೊಡಗಿರುವ ನಮ್ಮ ಸಮಾಜದ ನೌಕರರು ಒತ್ತಡದ ಜೀವನದ ನಡುವೆ ಎಲ್ಲ ಕುಟುಂಬದವನ್ನು ಒಂದೇ ವೇದಿಕೆಯ ಅಡಿಯಲ್ಲಿ ಅಣಿಗೊಳಿಸಿ ಸಂಸ್ಕಾರ ಮತ್ತು ಸಂಘಟನೆಯೊಂದಿಗೆ ಸದೃಢ ಸಮಾಜ ಕಟ್ಟೋಣ ಎಂದು ಹೇಳಿದರು.




ವಿಶೇಷ ಉಪನ್ಯಾಸಕರಾಗಿ ಆಗಮಿಸಿದ ರಾಜ್ಯೋತ್ಸವ ಪುರಸ್ಕೃತ ಹಾಗೂ ಜನಪದ ವಿದ್ವಾಂಸ ಡಾ. ಶಂಭು ಬಳಿಗಾರ ಅವಿಭಕ್ತ ಕುಟುಂಬ, ತಂದೆ-ತಾಯಿ, ಅಕ್ಕ-ತಂಗಿ, ಸಂಸ್ಕಾರಗಳ ಕುರಿತು ಮನಮುಟ್ಟವ ಹಾಗೆ ವಿವರಿಸಿದರು.

ಕಾರ್ಯಕ್ರಮದ ದಿವ್ಯ ಸಾನ್ನಿಧ್ಯವಹಿಸಿದ್ದ ಅಡ್ನೂರು-ರಾಜೂರು-ಗದಗ ಬ್ರಹನ್ಮಠದ ಪೂಜ್ಯಶ್ರೀ ಅಭಿನವ ಪಂಚಾಕ್ಷರ ಶಿವಾಚಾರ್ಯ ಮಹಾಸ್ವಾಮಿಗಳು ವಹಿಸಿ ಮಾತನಾಡಿ, ಮುಂದಿನ ದಿನಗಳಲ್ಲಿ ಉಚಿತವಾಗಿ ಲಿಂಗಧಾರಣೆ ಮೂಲಕ ಮಕ್ಕಳಲ್ಲಿ ಶಿಕ್ಷಣ, ಸಂಸ್ಕಾರ ನೀಡಲಾಗುವುದು ಎಂದು ಹೇಳಿದರು.

ಹುಬ್ಬಳ್ಳಿಯ ಹೆಸ್ಕಾಂನ ತಾಂತ್ರಿಕ ನಿರ್ದೇಶಕ ಎಸ್. ಜಗದೀಶ ಮಾತನಾಡಿ, ಕೆಲಸದ ಒತ್ತಡದ ಮಧ್ಯ ಕುಟುಂಬದವರೊಂದಿಗೆ ದೂರವಾಗುತ್ತಿರುವ ಇಂದಿನ ದಿನಗಳಲ್ಲಿ ಈ ಕಾರ್ಯಕ್ರಮದ ಮೂಲಕ ಸಂಘವು ತನ್ನ ಉದ್ದೇಶವನ್ನು ಈಡೇರಿಸಿಕೊಂಡಿದೆ. ಪ್ರತಿದಿನ ಕುಟುಂದವರೊಂದಿಗೆ ಬೆರೆತು ಮಾತನಾಡಿದಾಗ ಸಿಗುವ ಆನಂದವೇ ಬೇರೆ. ಈಗಲೂ ನಾನು ವಾರದಲ್ಲಿ ಒಮ್ಮೆಯಾದರೂ ನನ್ನ ಸಹೋದರ ಹಾಗೂ ಸಹೋದರಿಯರೊಂದಿಗೆ ಮಾತನಾಡದಿದ್ದರೆ ಏನೋ ಕಳೆದುಕೊಂಡ ಅನುಭವವಾಗುತ್ತದೆ ಎಂದು ಹೇಳಿದರು.

ಮುಖ್ಯ ಅತಿಥಿಗಳಾಗಿ ಹುಬ್ಬಳ್ಳಿಯ ಹೆಸ್ಕಾಂ (ಹಣಕಾಸು) ನಿಗಮ ಕಾರ್ಯಾಲಯದ ನಿರ್ದೇಶಕ ಪ್ರಕಾಶ ಪಾಟೀಲ, ಹುಬ್ಬಳ್ಳಿಯ ಕೆಪಿಟಿಸಿಎಲ್ ಅಧೀಕ್ಷಕ ಅಭಿಯಂತರ ವಿರೇಶಕುಮಾರ ಹೆಬ್ಬಾಳ, ಅತಿಥಿಗಳಾಗಿ ರೋಣದ ಕಾರ್ಯನಿರ್ವಾಹಕ ಅಭಿಯಂತರ ವಿ.ಟಿ. ರಾಜೂರ, ಗದಗ ಜಾಗೃತ ದಳದ ಎಇಇ ಐ.ಎಸ್. ಜವಳಿ, ಕೇಂದ್ರ ಸಮಿತಿ ಸದಸ್ಯ ಎನ್.ಎಫ್. ಅಸೂಟಿ, ಖಜಾಂಚಿ ಸಂಗಮೇಶ ನೇಗೂರ, ಸದಸ್ಯರಾದ ಐ.ಬಿ. ಪಾಟೀಲ, ಗುತ್ತಿಗೆದಾರರಾದ ಪ್ರಭುಸ್ವಾಮಿ ದಂಡಾವತಿಮಠ, ರವಿ ಗುಡಿಮನಿ, ನವೀನ ಕುಲಕರ್ಣಿ, ಮಹೇಶ ನಾಗರಹಳ್ಳಿ, ಪ್ರಭು ದೇಸಾಯಿಮಠ ಸೇರಿದಂತೆ ಕೆಪಿಟಿಸಿಎಲ್ ಹಾಗೂ ಹೆಸ್ಕಾಂ ವೀರಶೈವ ನೌಕರರ ಸಂಘದ ಪದಾಧಿಕಾರಿಗಳು ಉಪಸ್ಥಿತರಿದ್ದರು.

ಇದೇ ಸಂದರ್ಭದಲ್ಲಿ ವೀರಶೈವ ಲಿಂಗಾಯತ ಸಮುದಾಯದ ದಾನಿಗಳಿಗೆ, ಎಸ್.ಎಸ್.ಎಲ್.ಸಿ ಹಾಗೂ ಪಿಯುಸಿಯಲ್ಲಿ ಅತಿ ಹೆಚ್ಚು ಅಂಕ ಪಡೆದ ಪ್ರತಿಭಾನ್ವಿತ ವಿದ್ಯಾರ್ಥಿಗಳನ್ನು ಶ್ರೀಗಳು ಸನ್ಮಾನಿಸಿದರು.

ಅಂದಾನಸ್ವಾಮಿ ಮಠದ ಪ್ರಾಸ್ತಾವಿಕವಾಗಿ ಮಾತನಾಡಿದರು. ಬಸವರಾಜ ಹೊಕ್ಕಳದ ಸ್ವಾಗತಿಸಿದರು. ಉಮೇಶ ಗದಗ ನಿರೂಪಿಸಿದರು. 0ಗುರು ಕುಂಬಾರ ವಂದಿಸಿದರು. ನಂತರ ನಗರದ ನಟರಂಗ ಕಲ್ಚರಲ್ ಅಕಾಡೆಮಿ ವತಿಯಿಂದ ಸಾಂಸ್ಕೃತಿಕ ಕಾರ್ಯಕ್ರಮ ಜರುಗಿತು. ಸಿದ್ದು ಪಾಡಾ ಸಾಂಸ್ಕೃತಿಕ ಕಾರ್ಯಕ್ರಮ ನಡೆಸಿಕೊಟ್ಟರು.

### ಗೆಳೆಯರ ಬಳಗದ 5ನೇ ವರ್ಷದ ವಾರ್ಷಿಕೋತ್ಸವ ಸಮಾರಂಭ

# ಸ್ನೇಹದಲ್ಲಿ ಸ್ವಾರ್ಥ ಇರಬಾರದು

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಜಗತ್ತಿನಲ್ಲಿ ಎಲ್ಲಕ್ಕಿಂತ ಸ್ನೇಹ ದೊಡ್ಡದು. ಸುಧಾಮ-ಕೃಷ್ಣರ ಅಪ್ಪಟ ಸ್ನೇಹ ವಿಶ್ವಕ್ಕೆ ಮಾದರಿಯಾಗಿದೆ. ಕಷ್ಟ-ಸುಖದಲ್ಲಿ ಭಾಗಿಯಾಗುವವರೇ ನಿಜವಾದ ಸ್ನೇಹಿತರು ಎಂದು ಬಳಗದ ಸದಸ್ಯ ಹಾಗೂ ಧಾರವಾಡ ಕರ್ನಾಟಕ ವಿಜ್ಞಾನ ಮಹಾವಿದ್ಯಾಲಯದ ಸಹಪ್ರಾಧ್ಯಾಪಕ ಎಲ್.ಟಿ. ನಾಯಕ ಹೇಳಿದರು.

ಪಟ್ಟಣದ ಎಪಿಎಂಸಿ ವ್ಯಾಪಾರಸ್ಥರ ಸಂಘದಲ್ಲಿ ಭಾನುವಾರ ಪುರಸಭೆಯ ಉಮಾ ವಿದ್ಯಾಲಯ ಪ್ರೌಢಶಾಲೆಯಲ್ಲಿ 1984-85ನೇ ಸಾಲಿನಲ್ಲಿ ಎಸ್‌ಎಸ್‌ಎಲ್‌ಸಿ ವ್ಯಾಸಂಗ ಮಾಡಿದ ಗೆಳೆಯರ ಬಳಗದ 5ನೇ ವರ್ಷದ ವಾರ್ಷಿಕೋತ್ಸವ ಸಮಾರಂಭ ಉದ್ದೇಶಿಸಿ ಅವರು ಮಾತನಾಡಿದರು.

ಉಪನ್ಯಾಸಕ ಮಂಜುನಾಥ ಹೊಳ್ಳಿಯವರಮಠ ಮಾತನಾಡಿ, ಉತ್ತಮ ಸ್ನೇಹಿತರು ಸಿಕ್ಕರೆ ಬದುಕು ಸ್ವಾರಸ್ಯಕರವಾಗುತ್ತದೆ. ಪ್ರತಿದಿನ ಸ್ನೇಹಿತರೊಡನೆ ಒಡನಾಟ ಇಟ್ಟುಕೊಂಡು ಅವರೊಂದಿಗೆ ಕಷ್ಟ-ಸುಖ ಹಂಚಿಕೊಳ್ಳಬೇಕು. ಅಂದಾಗ ಮಾತ್ರ ಬದುಕಿನಲ್ಲಿ ಎದುರಾಗುವ ಸಮಸ್ಯೆಗಳಿಂದ ಹೊರ ಬರಲು ಸಾಧ್ಯ. ಸ್ನೇಹದಲ್ಲಿ ಸ್ವಾರ್ಥ ಇರಬಾರದು. ಅಂಥ ಸ್ನೇಹ ಬಹಳ ದಿನ ಉಳಿಯಲಾರದು ಎಂದು ಹೇಳಿದರು.



ಮಹಾಬಳೇಶ್ವರ ಮೆಡೇರಿ, ರುದ್ರಗೌಡ ಪಾಟೀಲ ಕಾರ್ಯಕ್ರಮ ಉದ್ಘಾಟಿಸಿದರು. ಮಹೇಶ ಕರೆಕಲ್ಲ, ಸುಮಾ ಚೋಟಗಲ್ಲ, ಬಳಗದ ಸದಸ್ಯರಾದ ಶಿವಶಂಕರ ಬಿಂದಕಟ್ಟಿ ಮತ್ತು ಚಂದ್ರಶೇಖರ ಸಂಕಣ್ಣವರ ಮಾತನಾಡಿದರು. ಬಿ.ಎಂ. ಕೆರೂರ, ಮಧುಸೂದನ ದೇಶಪಾಂಡೆ, ಪಿ.ಎಸ್. ಬಾಳಿಹಳ್ಳಿಮಠ, ಎಲ್.ಎನ್. ನಂದೆಣ್ಣವರ, ಸರಿತಾ ಕನವಳ್ಳಿ, ಮೀನಾ ಹಿರೇಮಠ, ಪಿ.ಎಸ್. ಬಾಳಿಹಳ್ಳಿಮಠ, ಸೋಮಣ್ಣ ಲಮಾಣಿ ಇದ್ದರು.

ಅಧ್ಯಕ್ಷತೆ ವಹಿಸಿದ್ದ ಬಳಗದ ಅಧ್ಯಕ್ಷ ನಾಗರಾಜ ಹಣಗಿ ಮಾತನಾಡಿ ಬಳಗದ ವತಿಯಿಂದ ಕೊರೊನಾ ಸಮಯದಲ್ಲಿ ಬಡವರಿಗೆ ಆಹಾರ ಕಿಟ್ ವಿತರಣೆ, ಪರಿಸರ ದಿನಾಚರಣೆ ಸೇರಿ ಅನೇಕ ಸಮಾಜಮುಖಿ ಕಾರ್ಯಗಳನ್ನು ಮಾಡಲಾಗುತ್ತಿದೆ. ತಿಂಗಳ ಕೊನೆಯ ಭಾನುವಾರ ದೇವಸ್ಥಾನ, ರುದ್ರಭೂಮಿ ಸ್ವಚ್ಛಗೊಳಿಸುವ ಕೆಲಸಗಳನ್ನು ಹಮ್ಮಿಕೊಳ್ಳಲು ನಿರ್ಧರಿಸಲಾಗಿದ್ದು, ಎಲ್ಲ ಸದಸ್ಯರ ಸಹಕಾರ ಮುಖ್ಯ ಎಂದರು.

ಕೆ.ಎಸ್. ಬಾಳೇಶ್ವರಮಠ ಪ್ರಾಸ್ತಾವಿಕವಾಗಿ ಮಾತನಾಡಿದರು. ಬಸವರಾಜ ಹೆಬ್ಬಾಳ, ಬಿ.ಎಂ. ಕುಂಬಾರ, ಚಂದ್ರಶೇಖರ ಚಟ್ಲಿ, ಸುರೇಶ ಚೋಟಗಲ್, ಚಂದ್ರಶೇಖರ ವಡಕಣ್ಣವರ ನಿರೂಪಿಸಿದರು. ಉಮಾ ವಿದ್ಯಾಲಯ ಪ್ರೌಢಶಾಲೆಯಲ್ಲಿ ಕಳೆದ ಸಾಲಿನ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಪ್ರಥಮ, ದ್ವಿತೀಯ ಮತ್ತು ತೃತೀಯ ಸ್ಥಾನ ಪಡೆದ ಮಕ್ಕಳಿಗೆ ಪ್ರತಿಭಾ ಪುರಸ್ಕಾರ ನೀಡಲಾಯಿತು. ಸರಿತಾ ಕನವಳ್ಳಿ, ಕುಮಾರಿ ಅಂಗಡಿ ಅವರಿಂದ ಸಂಗೀತ ಕಾರ್ಯಕ್ರಮ ಜರುಗಿತು. ವೆಂಕಟೇಶ ಪಾಟೀಲ, ಅಕ್ಷಯ ಭಜಂತ್ರಿ ತಬಲಾ ಸಾಥ್ ನೀಡಿದರು.

## ದೆಹಲಿ ಚುನಾವಣೆ: ಎಎಪಿಯ 'ಮಹಿಳಾ ಸಮ್ಮಾನ್' ನಂತರ ಕಾಂಗ್ರೆಸ್ 'ಪ್ಯಾರಿ ದೀದಿ' ಯೋಜನೆ

■ವಿಜಯಸಾಕ್ಷಿ ಸುದ್ದಿ, ಹೊಸದಿಲ್ಲಿ

ನವದೆಹಲಿ ವಿಧಾನಸಭೆ ಚುನಾವಣೆಗೂ ಮುನ್ನ ಆಮ್ ಆದ್ಮಿ ಪಕ್ಷದ ನಂತರ ಈಗ ಕಾಂಗ್ರೆಸ್ ದೆಹಲಿಯ ಮಹಿಳೆಯರಿಗೆ ಪ್ರತಿ ತಿಂಗಳು 2500 ರೂಪಾಯಿ ನೀಡುವುದಾಗಿ ಭರವಸೆ ನೀಡಿದೆ. ಎಎಪಿಯ 'ಮಹಿಳಾ ಸಮ್ಮಾನ್' ಯೋಜನೆಯ ಮುಂದೆ ಕಾಂಗ್ರೆಸ್ 'ಪ್ಯಾರಿ ದೀದಿ' ಯೋಜನೆ ತರುವುದಾಗಿ ಭರವಸೆ ನೀಡಿದೆ.

ಹೊಸದಿಲ್ಲಿ ಇಂದು ನಡೆಸಿದ ಪತ್ರಿಕಾಗೋಷ್ಠಿಯಲ್ಲಿ ಕರ್ನಾಟಕದ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ದೆಹಲಿಯಲ್ಲಿ ಸರ್ಕಾರ ರಚನೆಯಾದ ನಂತರ ಪ್ಯಾರಿ ದೀದಿ ಯೋಜನೆಯಡಿ ಮಹಿಳೆಯರಿಗೆ 2500 ರೂ. ನೀಡುವುದಾಗಿ ಭರವಸೆ ನೀಡಿದ್ದಾರೆ.

ಈ ಯೋಜನೆಯಡಿ ದೆಹಲಿಯಲ್ಲಿ ಕಾಂಗ್ರೆಸ್ ಸರ್ಕಾರ ರಚನೆಯಾದ ನಂತರ ಮಹಿಳೆಯರಿಗೆ ಪ್ರತಿ ತಿಂಗಳು 2500 ರೂ. ಮಹಿಳಾ ಸಮ್ಮಾನ್ ಯೋಜನೆಯಡಿ ದೆಹಲಿಯ ಮಹಿಳೆಯರಿಗೆ ರೂ. 2100 ನೀಡುವುದಾಗಿ ಆಮ್ ಆದ್ಮಿ ಪಕ್ಷವು ಮೊದಲು ಭರವಸೆ ನೀಡಿತ್ತು.



ಪಟ್ಟಣದಲ್ಲಿ ಹೆಸ್ಕಾಂ ಉಪವಿಭಾಗ ಕಚೇರಿ ಪ್ರಾರಂಭಿಸಬೇಕೆಂದು ಗದಗ ಹೆಸ್ಕಾಂನ ಕಾರ್ಯನಿರ್ವಾಹಕ ಇಂಜಿನಿಯರರಿಗೆ ಸೋಮವಾರ ಶಿರಹಟ್ಟಿಯ ಸ್ಥಳೀಯ ಕುಂದುಕೊರತೆ ನಿವಾರಣಾ ಸಮಿತಿ ವತಿಯಿಂದ ಮನವಿ ಸಲ್ಲಿಸಲಾಯಿತು. ಈ ಸಂದರ್ಭದಲ್ಲಿ ಅಕ್ಬರಸಾಬ ಯಾದಗಿರಿ, ಶ್ರೀನಿವಾಸ ಬಾರಬಾರ, ಜಾಕೀರ ಕೋಳಿವಾಡ, ಇಂತಿಯಾಜ ಶಿಗ್ಲಿ, ರಫೀಕ ಕೆರಿಮನಿ, ಮುನ್ನಾ ಢಾಲಾಯತ ಮುಂತಾದವರು ಉಪಸ್ಥಿತರಿದ್ದರು.

## ಭಾರೀ ಬೆಲೆ ಕುಸಿತ: ತರಕಾರಿ ಬೆಳೆಗಳನ್ನು ಹೊಲದಲ್ಲಿ ನಾಶಮಾಡುತ್ತಿರುವ ಜಾರ್ಖಂಡ್ ರೈತರು

■ವಿಜಯಸಾಕ್ಷಿ ಸುದ್ದಿ, ರಾಂಚಿ

ಜಾರ್ಖಂಡ್‌ನಲ್ಲಿ ಕಳೆದ ವಾರದಿಂದ ರಾಜ್ಯಾದ್ಯಂತ ಮಾರುಕಟ್ಟೆಗಳಲ್ಲಿ ತರಕಾರಿ ಬೆಳೆಯ ಬೆಲೆಗಳು ಭಾರೀ ಕುಸಿದಿದ್ದು, ರೈತರು ಬೇಸಾಯದ ಮೂಲ ವೆಚ್ಚವನ್ನು ಸಹ ಮರುಪಡೆಯಲು ಸಾಧ್ಯವಾಗದ ಕಾರಣ ಬಂಪರ್ ಫಸಲು ಹೊರತಾಗಿಯೂ ತೀವ್ರ ಆರ್ಥಿಕ ಸಂಕಷ್ಟದಲ್ಲಿ ಸಿಲುಕಿದ್ದು, ಹತಾಶೆಗೊಂಡು ಹೊಲದಲ್ಲಿಯೇ ಅವುಗಳನ್ನು ನಾಶಪಡಿಸುತ್ತಿದ್ದಾರೆ. ರಾಂಚಿಯ ನಗರದ ಮಾರುಕಟ್ಟೆಗಳಲ್ಲಿ ಪ್ರಮುಖ ತರಕಾರಿಗಳಾದ ಹೂಕೋಸು, ಎಲೆಕೋಸು, ಪಾಲಕ್ ಮತ್ತು ಟೊಮೆಟೊಗಳನ್ನು ಕೆಜಿಗೆ 5-10 ರೂ.ಗೆ ಮಾರಾಟ ಮಾಡಲಾಗುತ್ತಿದೆ. ಗ್ರಾಮೀಣ ಪ್ರದೇಶದಲ್ಲಿ ಈ ಬೆಲೆ ಇನ್ನೂ ಕಡಿಮೆ ಇದೆ. ಇದರಿಂದ ರೈತರು ಹತಾಶರಾಗಿ ತಮ್ಮ ತರಕಾರಿ ಬೆಳೆ ನಾಶ ಮಾಡುತ್ತಿದ್ದಾರೆ. ಮಧ್ಯವರ್ತಿಗಳು ರೈತರಿಗೆ ನ್ಯಾಯಯುತ ಬೆಲೆ ನೀಡಲು ಸಿದ್ಧರಿಲ್ಲ. ಈ ಕುರಿತು ಸರಕಾರವು ಕಠಿಣ ಕ್ರಮಗಳನ್ನು ತೆಗೆದುಕೊಳ್ಳುವಂತೆ ರೈತರು ಒತ್ತಾಯಿಸುತ್ತಿದ್ದಾರೆ.

ಚಿತಾರ್‌ಪುರ ಬ್ಲಾಕ್‌ನ ಬಡ್ಕಿಪೋನಾ ಗ್ರಾಮದ ರೈತ ರಾಧೇಶ್ಯಾಮ್ ಮಹತೋ ಎಂಬುವರು ತಮ್ಮ ಒಂದು ಎಕರೆ ಜಮೀನಿನಲ್ಲಿದ್ದ ಎಲೆಕೋಸು ಬೆಳೆಯನ್ನು ಟ್ರ್ಯಾಕ್ಟರ್ ಓಡಿಸಿ ನೆಲಸಮಗೊಳಿಸಿದ್ದಾರೆ. ಇದೇ ರೀತಿಯ ಘಟನೆ ಗೋಳಾ ಬ್ಲಾಕ್‌ನಲ್ಲಿ ಸಂಭವಿಸಿದ್ದು, ನ್ಯಾಯಯುತ ಬೆಲೆ ಸಿಗದ ಕಾರಣ ಮತ್ತೊಬ್ಬ ರೈತ ತನ್ನ ಹೂಕೋಸು ಬೆಳೆಯನ್ನು ನಾಶಪಡಿಸಿದ್ದಾನೆ. ರಾಂಚಿ ಜಿಲ್ಲೆಯ ಒರ್ಮಾಂಜಿಯಲ್ಲಿ ರೈತರು ತಮ್ಮ ತರಕಾರಿ ಬೆಳೆಗಳನ್ನು ಕಿತ್ತು ಬಿಸಾಡುತ್ತಿದ್ದಾರೆ. ಐದಾರು ಎಕರೆಯಲ್ಲಿ ಹೂಕೋಸು ಹಾಗೂ ಎಲೆಕೋಸು ಕೃಷಿ ಮಾಡಿರುವುದಾಗಿ ಉಕ್ರೀಡ್ ಗ್ರಾಮದ ರೈತ ಕಾಮೇಶ್ವರ ಮಹತೋ ತಿಳಿಸಿದ್ದಾರೆ.

ಈ ತರಕಾರಿ ಬೆಳೆಗಳಿಗೆ ಕೆ.ಜಿ.ಗೆ ಕೇವಲ 2-3 ರೂ.ಗೆ ಸಿಗುತ್ತಿದ್ದು, ಮಾರುಕಟ್ಟೆಯ ಸಾಗಣೆ ವೆಚ್ಚವೂ ಗಳಿಕೆಗಿಂತ ಹೆಚ್ಚಾಗಿದೆ ಎಂದು ರೈತರು ತಮ್ಮ ಅಳಲು ತೋಡಿಕೊಳ್ಳುತ್ತಿದ್ದಾರೆ. ರಮೇಶ್ ವರ್ಮಾ, ರಾಮಚಂದ್ರ ಮಹತೋ, ಲಖನ್‌ಲಾಲ್ ಮಹತೋ ಮತ್ತು ನಿರಂಜನ್ ಮಹತೋ ಸೇರಿದಂತೆ ಬೊಕಾರೊ ಜಿಲ್ಲೆಯ ಕಸ್ಮಾರ್ ಬ್ಲಾಕ್‌ನ ಜಮ್ದರ್ ಗ್ರಾಮದ ರೈತರು ಇದೇ ರೀತಿಯ ದುಃಖಗಳನ್ನು ಹಂಚಿಕೊಂಡಿದ್ದಾರೆ.

### ಬಾಲ ವಿನಾಯಕ ವಿದ್ಯಾನಿಕೇತನದ 39ನೇ ವಾರ್ಷಿಕ ಸ್ನೇಹ ಸಮ್ಮೇಳನ

# ಮಕ್ಕಳ ಮೇಲೆ ಭರವಸೆಯನ್ನಿಡಿ

■ವಿಜಯಸಾಕ್ಷಿ ಸುದ್ದಿ, ಗದಗ

ಮಕ್ಕಳು ದೂರದರ್ಶನ, ಮೊಬೈಲ್, ಧಾರಾವಾಹಿ ಇವುಗಳ ಪ್ರಭಾವಕ್ಕೆ ಒಳಗಾಗದಂತೆ ಪಾಲಕರು ಗಮನಿಸಬೇಕು. ಪ್ರತಿ ಒಬ್ಬ ತಂದೆ-ತಾಯಿ ಮಕ್ಕಳ ಮೇಲೆ ಭರವಸೆಯನ್ನು ಇಡಬೇಕು. ಯಾವ ಮಕ್ಕಳು ತಮ್ಮ ಸಮಸ್ಯೆಗಳನ್ನು ಪಾಲಕರ ಮುಂದೆ ಹೇಳಿಕೊಳ್ಳುತ್ತಾರೋ ಆಗಲೇ ಪಾಲಕರ ಮತ್ತು ಮಕ್ಕಳ ನಡುವೆ ಬಾಂಧವ್ಯ ಬೆಳೆಯುತ್ತದೆ ಎಂದು ಮಹೇಶ ಜಾಧವ ಅಭಿಪ್ರಾಯಪಟ್ಟರು.

ನಗರದ ಬಾಲ ವಿನಾಯಕ ವಿದ್ಯಾನಿಕೇತನದ 39ನೇ ವಾರ್ಷಿಕ ಸ್ನೇಹ ಸಮ್ಮೇಳನವನ್ನು ಉದ್ಘಾಟಿಸಿ ಅವರು ಮಾತನಾಡುತ್ತಿದ್ದರು.

ನಮ್ಮ ಮಕ್ಕಳಿಗೆ ಸಮಾಜ ಸೇವೆಯ, ಇನ್ನೊಬ್ಬರಿಗೆ ಸಹಾಯ ಮಾಡುವ ಮನೋಭಾವನೆಯನ್ನು ಬೆಳೆಸಬೇಕು. ಸಮಾಜದಿಂದ ದೂರ ಉಳಿದ ಎಚ್.ಐ.ವಿ ಪೀಡಿತ ಮಕ್ಕಳಿಗೆ ಸಹಾಯ ಮಾಡಲು ತಾವು ಮತ್ತು ತಮ್ಮ ಸ್ನೇಹಿತರು ಮಹೇಶ ಫೌಂಡೇಶನ್ ಸಂಸ್ಥೆಯನ್ನು ಪ್ರಾರಂಭಿಸಿ ಅದನ್ನು ಯಾವ ರೀತಿ ಬೆಳೆಸುತ್ತಿದ್ದಾರೆಂದು ಪಾಲಕರಿಗೆ ಅರ್ಥೈಸಿದರು.

ಪಂ. ಪುಟ್ಟರಾಜ ಮ್ಯೂಜಿಕ ಕ್ಲಬ್ ತಂಡದವರಾದ ಸಿಂಧು ಮತ್ತು ಸಂಗಡಿಗರು ಪ್ರಾರ್ಥನಾಗೀತೆ ಹಾಡಿದರು. ಶ್ವೇತಾ ಯಮಗೌಳಿ ಮತ್ತು ಸಂಗಡಿಗರು ಸ್ವಾಗತ ನೃತ್ಯ ಪ್ರದರ್ಶಿಸಿದರು. ವಿದ್ಯಾರ್ಥಿಗಳಾದ ಸಂಜಯ ಕುಲಕರ್ಣಿ ಮತ್ತು ಲಕ್ಷ್ಮೀ ಬರದೂರ್ ಅತಿಥಿಗಳನ್ನು ಪರಿಚಯಿಸಿದರು. ಮೊಹ್ಮದ ಅಜೀಮ್ ಬಿಜಾಪುರ ಪುಷ್ಪಾರ್ಪಣೆ ನಡೆಸಿಕೊಟ್ಟನು. ಶಾಲಾ ನಿರ್ದೇಕರಾದ ವಿನಾಯಕ್ ಆರ್ 2024-25ನೇ ಸಾಲಿನ ಶಾಲಾ ವರದಿಯನ್ನು ಓದಿದರು. ಸಾಹಿಲ್ ತಂಬೋಟಿ ಶಾಲಾ ವಾರ್ಷಿಕ ಪುಸ್ತಕವಾದ 'ಶುಭಂ' ಬಿಡುಗಡೆ ಕಾರ್ಯಕ್ರಮ ನಡೆಸಿಕೊಟ್ಟರು.





ವಿದ್ಯಾರ್ಥಿಗಳಾದ ಆದಿತ್ಯ ಅಂಗಡಿ, ನಂದಾ ಮಾವಿನಕಾಯಿ, ಚಿನ್ಮಯ ಆರಿ, ಅನುಷಾ ತಿಪ್ಪಾಪುರ, ತನ್ವೀರ್ ಜೈನಾಪುರ, ತನುಷಾ ಹಳ್ಳಿ, ಪಂಚಾಕ್ಷರಯ್ಯ ಹಿರೇಮಠ, ವೈಷ್ಣವಿ ತಿಪ್ಪಾರಡ್ಡಿ, ದಕ್ಷ ಜೈನ್, ಪೂಜಾ ಲಮಾಣಿ ಸಾಂಸ್ಕೃತಿಕ ಕಾರ್ಯಕ್ರಮ ನಡೆಸಿಕೊಟ್ಟರು. ಮಿಸ್ಬಾ ಕೊಟ್ಟರು, ಪ್ರತೀಕ ಭೂಸನೂರಮಠ, ಸಾಕ್ಷಿ ಮರಿಗೌಡ್ರ, ಶ್ರೀನಿವಾಸ ಬಾಕಳೆ ಪ್ರಶಸ್ತಿ ವಿತರಣಾ ಕಾರ್ಯಕ್ರಮ ನಿರೂಪಿಸಿದರು. ಶ್ರಾವಣಿ ಅಣ್ಣಿಗೇರಿ ಮತ್ತು ಅನುಷ್ ಹಿರೇಮಠ ಕಾರ್ಯಕ್ರಮ ನಿರೂಪಿಸಿದರು. ವೈಷ್ಣವಿ ಮೆಣಸಗಿ ಸ್ವಾಗತಿಸಿದಳು. ಪವಿತ್ರ ರಂಗಾರಡ್ಡಿಯವರ ವಂದಿಸಿದಳು.

2023 2024ರ ಶೈಕ್ಷಣಿಕ ವರ್ಷದ ಪರೀಕ್ಷೆಗಳಲ್ಲಿ ಅತಿ ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳಿಗೆ, 2024-25ನೇ ಸಾಲಿನ ಶಾಲೆಯ ಕ್ರೀಡಾ ವೀರಾಗ್ರಣಿ ವಿಜೇತರಿಗೆ, ಪಠ್ಯ-ಸಹಪಠ್ಯ ಚಟುವಟಿಕೆಯಲ್ಲಿ ಪ್ರಶಸ್ತಿ ವಿಜೇತರಿಗೆ, ಶಿಸ್ತಿನ ತರಗತಿ, ಸೇರಿ ವಿವಿಧ ವಿಭಾಗಗಳಲ್ಲಿ ವಿದ್ಯಾರ್ಥಿಗಳಿಗೆ ಪ್ರಶಸ್ತಿ ವಿತರಿಸಲಾಯಿತು.

ಕಾರ್ಯಕ್ರಮದಲ್ಲಿ ಶಾಲೆಯ ಕಾರ್ಯದರ್ಶಿ ಎಸ್.ರವಿ, ಪ್ಲೇ ಹೋಮ್‌ನ ಮುಖ್ಯಸ್ಥರಾದ ಗಂಗಾ, ನಿರ್ದೇಶಕರಾದ ವಿನಾಯಕ್ ಆರ್., ಇ.ಎಲ್.ಸಿ ಮುಖ್ಯಸ್ಥರಾದ ಮಲ್ಲಿಕಾ ರವಿ, ಪ್ರಾಚಾರ್ಯ ವಿ.ಎಂ. ಅಡ್ನೂರ, ಉಪ ಪ್ರಾಚಾರ್ಯ ಪಿ.ಜಿ. ಬ್ಯಾಳಿ, ಶಿಕ್ಷಕ-ಶಿಕ್ಷಕೇತರ ಸಿಬ್ಬಂದಿ ವರ್ಗದವರು, ಪಾಲಕರು ಮತ್ತು ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ಕವನ

## ಭುವನೇಶ್ವರಿ ಪುತ್ರ



ಅನುರೂಪಳಾದ ಭುವನೇಶ್ವರಿ ದೇವಿ
ವಿಶ್ವನಾಥ ದತ್ತರ ಒಲವಿನ ಸ್ಪೂರ್ತಿ
ಮಕರ ಸಂಕ್ರಾಂತಿಯ ತೇಜಸ್ವಿಮೂರ್ತಿ
ನರೇಂದ್ರನಾಥರು
ಸ್ವಾಮಿವಿವೇಕಾನಂದರಾದ ಕೀರ್ತಿ (1)

ಬಾಲ್ಯದಲ್ಲಿ ಅಪಾರವಾದ ಪಾಂಡಿತ್ಯ
ಭಾಷಣ, ಹಾಡು, ಕುಸ್ತಿ, ಪಠಣ ಸಾಹಿತ್ಯ
ಹಲವು ಭಾಷಾ, ಪುರಾಣ
ಶಾಸ್ತ್ರೀಯ ಸಂಗೀತ
ಆಧ್ಯಾತ್ಮಿಕ ಅರುಣೋದಯದ
ಈ ಧೀಮಂತ (2)

ಆದರ್ಶ, ಶಿಸ್ತು, ಸ್ವಯಂ, ವಿಧೇಯತೆ, ಸಂಜ್ಞಾನ,
ಕಾಯಕಪ್ರಜ್ಞೆ, ಪ್ರಾಮಾಣಿಕತೆ
ಶಿವನಾಮಸ್ಮರಣೆ, ಜ್ಞಾನ,
ಯೋಗ ಏಕಾಗ್ರತೆ
ಯುವ ಶಕ್ತಿಯ ಸರ್ವಾಂಗೀಣದ ಜಾಗೃತಿ (3)

ದೇಶದ ಸಂಚಾರಿಯಾಗಿ ಉಪದೇಶಾಮೃತ
ಸನಾತನ ಧರ್ಮ ವಿಶ್ವಕೆಲ್ಲ ವಿಸ್ತೃತ
ಸ್ವಾಮಿ ವಿವೇಕಾನಂದರ
ಈ ದಿಟ್ಟ ಆಕೃತಿ
ಭಾರತದ ಸಂಸ್ಕೃತಿಯು ಜಗಕ್ಕೆಲ್ಲ ಪ್ರಖ್ಯಾತಿ (4)

ಜಾಸತ್ಯೆ ವರ್ಣಂ, ಜಾಸತ್ಯೆ ಮರಣ ಧೃವಂ
ಧರ್ಮದ ಪುನರುಜ್ಜೀವನಕ್ಕಾಗಿ ಸದಾ ಸಿದ್ಧಂ
ಅಲ್ಪ ಆಯುಷ್ಯದ ಈ ಯುವ ಗುರೂಜಿ
ದೇಶದ ಭ್ರಾತೃತ್ವದ ಸಂದೇಶ ಸಾರಿದ ಗುರೂಜಿ
ಭುವನೇಶ್ವರಿ ದೇವಿಯ ಹೆಮ್ಮೆಯ ಪುತ್ರ ಸ್ವಾಮಿ ವಿವೇಕಾನಂದ ಜಿ

**– ಕುಮಾರಿ ಸುವರ್ಣ ಮಾಳಗಿಮನಿ.**
**ಬಂಕಾಪುರ.**

**ಕೇಂದ್ರ ಗೃಹ ಸಚಿವ ಅಮಿತ್ ಶಾ ಹೇಳಿಕೆ ಖಂಡಿಸಿ ಕೊಪ್ಪಳ ಬಂದ್ ಯಶಸ್ವಿ**

# ಅಮಿತ್ ಶಾರನ್ನು ಗಡಿಪಾರು ಮಾಡಿ

**■ವಿಜಯಸಾಕ್ಷಿ ಸುದ್ದಿ, ಕೊಪ್ಪಳ**

ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರ ಅಂಬೇಡ್ಕರ್ ಬಗೆಗಿನ ಅವಹೇಳನಕಾರಿ ಹೇಳಿಕೆ ಖಂಡಿಸಿ ಕೊಪ್ಪಳ ಜಿಲ್ಲೆ ಬಂದ್ ನಡೆಸಿ, ರಾಷ್ಟ್ರಪತಿ ದ್ರೌಪದಿ ಮುರ್ಮು ಅವರಿಗೆ ಕೊಪ್ಪಳ ಜಿಲ್ಲಾಧಿಕಾರಿಗಳ ಮೂಲಕ ಮನವಿ ಸಲ್ಲಿಸಲಾಯಿತು.

ಜಿಲ್ಲಾ ಕೇಂದ್ರ ಕೊಪ್ಪಳ-ಭಾಗ್ಯನಗರ ಅವಳಿ ನಗರಗಳಲ್ಲಿ ಸೋಮವಾರ ಬೆಳಿಗ್ಗೆಯಿಂದಲೇ ಎಲ್ಲಾ ಅಂಗಡಿಕಾರರು ಸ್ವಯಂ ಪ್ರೇರಣೆಯಿಂದ ಬಂದ್ ಮಾಡಿ ಬಂದ್ ಪ್ರತಿಭಟನೆಗೆ ಬೆಂಬಲ ಸೂಚಿಸಿದರು. ಅಶೋಕ ವೃತ್ತದ ಸುತ್ತ ಮಾನವ ಸರಪಳಿ ರಚಿಸಿ ನಂತರ ಪ್ರತಿಭಟನಾಕಾರರು ಮಧ್ಯಾಹ್ನದ ಸುಮಾರಿಗೆ ಬೃಹತ್ ಪ್ರತಿಭಟನಾ ಮೆರವಣಿಗೆ ಪ್ರಾರಂಭಿಸಿ ರಾಷ್ಟ್ರೀಯ ಹೆದ್ದಾರಿಯಿಂದ ಸಾಲಾರ್ ಜಂಗ್ ರಸ್ತೆ ಮೂಲಕ ಅಶೋಕ ವೃತ್ತ ತಲುಪಿ ಬೃಹತ್ ಬಹಿರಂಗ ಸಭೆ ನಡೆಸಿದರು.

ಸಂವಿಧಾನ ಸಂರಕ್ಷಣಾ ಸಮಿತಿಯ ಮುಖಂಡ ಹನುಮೇಶ್ ಕಡೆಮನಿ ಮಾತನಾಡಿ, ಡಾ. ಅಂಬೇಡ್ಕರರ ಬಗ್ಗೆ ಅವಹೇಳನಕಾರಿಯಾಗಿ ಮಾತನಾಡಿರುವ ಕೇಂದ್ರ ಗೃಹ ಸಚಿವ ಅಮಿತ್ ಶಾರನ್ನು ದೇಶದಿಂದ ಗಡಿಪಾರು ಮಾಡಬೇಕು. ಇಂಥವರಿಂದ ದೇಶದಲ್ಲಿ ಅಶಾಂತಿಯಾಗುತ್ತಿದೆ. ಇದೇ ರೀತಿ ಮುಂದುವರೆದರೆ ಮುಂದಿನ ದಿನಗಳಲ್ಲಿ ಇಡೀ ದೇಶದಲ್ಲಿ ರಕ್ತಪಾತವಾಗುತ್ತದೆ ಎಂದು ಎಚ್ಚರಿಕೆ ನೀಡಿದರು.



ನಗರ ಸಭೆ ಅಧ್ಯಕ್ಷ ಅಮ್ಜದ್ ಪಟೇಲ್ ಮಾತನಾಡಿ, ಎಲ್ಲಾ ಸಮಾಜದವರಿಗೂ ಸಮಾನತೆಯನ್ನು, ನಮಗಾಗಿ ಹಕ್ಕನ್ನು ಕೊಟ್ಟಿರುವ ಬಾಬಾ ಸಾಹೇಬ್ ಅವರ ಅವರ ತಂಟೆಗೆ ಬಂದರೆ ಇಡೀ ದೇಶದಲ್ಲಿ ಅಶಾಂತಿ ಮೂಡುತ್ತದೆ ಎಂದರು.

ಜಿಲ್ಲಾಧಿಕಾರಿಗಳ ಅನುಪಸ್ಥಿತಿಯಲ್ಲಿ ಅಪರ ಜಿಲ್ಲಾಧಿಕಾರಿ ಸಿದ್ರಾಮೇಶ್ವರ ಮನವಿ ಸ್ವೀಕರಿಸಿದರು. ಈ ಸಂದರ್ಭದಲ್ಲಿ ಸಂವಿಧಾನ ಸಂರಕ್ಷಣಾ ಸಮಿತಿ ಮುಖಂಡರಾದ ರಾಮಣ್ಣ ಚೌಡಕಿ, ಬಂಡಾಯ ಸಾಹಿತಿ ಅಲ್ಲಮ ಪ್ರಭು ಬೆಟ್ಟದೂರ, ಅಖಿಲ ಭಾರತ ಕಾರ್ಮಿಕ ಸಂಘಟನೆಗಳ ಒಕ್ಕೂಟದ ಜಿಲ್ಲಾಧ್ಯಕ್ಷ ಬಸವರಾಜ ಶೀಲವಂತರ್, ದಲಿತ ಸಂಘಟನೆಯ ನಾಯಕ ಸಿದ್ದರಾಮ ಹೊಸಮನಿ, ಪಾಸ್ಟರ್ಸ್ ಅಸೋಸಿಯೇಷನ್ ಜಿಲ್ಲಾ ಅಧ್ಯಕ್ಷ ಚನ್ನಬಸಪ್ಪ ಅಪ್ಪಣ್ಣವರ್, ದಲಿತ ಪರ ಸಂಘಟನೆ ಹಿರಿಯ ನಾಯಕ ಟಿ.ರತ್ನಾಕರ, ಯಮನೂರಪ್ಪ ನಾಯ್ಕ ಮುಂತಾದವರು ಮಾತನಾಡಿದರು

ಕೆ.ಬಿ. ಗೋನಾಳ, ಜನಪರ ಸಂಘಟನೆಗಳ ಒಕ್ಕೂಟದ ಜಿಲ್ಲಾ ಸಂಚಾಲಕ ಎಸ್.ಎ. ಗಫಾರ್, ಕರ್ನಾಟಕ ರಾಜ್ಯ ಕಟ್ಟಡ ಕಟ್ಟುವ ಮತ್ತು ಕಲ್ಲು ಒಡೆಯುವ ಕ್ವಾರಿ ಕಾರ್ಮಿಕರ ಸಂಘದ ಜಿಲ್ಲಾಧ್ಯಕ್ಷ ತುಕಾರಾಮ್ ಪಾತ್ರೋಟಿ, ಪರುಶುರಾಮ ಕೆರೆಹಳ್ಳಿ, ಜ್ಯೋತಿ ಗೊಂಡಬಾಳ, ಕಾಶಪ್ಪ ಚಲವಾದಿ, ಸುಕ್ರಾಜ್ ತಾಳಕೇರಿ, ನಿಂಗಪ್ಪ ಜಿ.ಎಸ್. ಬೆಣಕಲ್ಲ, ಕರ್ನಾಟಕ ಜನಶಕ್ತಿ ಸಂಘಟನೆಯ ರಾಜ್ಯ ನಾಯಕ ಕರಿಯಪ್ಪ ಗುಡಿಮನಿ, ಆದಿಲ್ ಪಟೇಲ್, ಕರ್ನಾಟಕ ಮಾದಿಗ ರಕ್ಷಣಾ ವೇದಿಕೆ ಜಿಲ್ಲಾಧ್ಯಕ್ಷ ಮುದುಕಪ್ಪ ಹೊಸಮನಿ, ಈಶಪ್ಪ ಶಿರೂರು, ಕೌಸರ್ ಕೋಲ್ಕಾರ್, ಯಲ್ಲಪ್ಪ ಬಳಗಾನೂರ, ಗವಿಸಿದ್ದಪ್ಪ ಬೆಲ್ಲದ್, ಮಖಬೂಲ್ ರಾಯಚೂರು ಮುಂತಾದವರು ಭಾಗವಹಿಸಿದ್ದರು.

> ಬಂಡಾಯ ಸಾಹಿತಿ ಬಸವರಾಜ ಸೂಳಿಬಾವಿ ಮಾತನಾಡಿ, ಗೃಹ ಸಚಿವರಿಗೂ, ಸಾಮಾನ್ಯ ಜನರಿಗೂ ಅಷ್ಟೇ ಗೌರವ ಸಿಗಬೇಕು ಎಂದು ಹೇಳಿದವರು ಅಂಬೇಡ್ಕರ್. ಅಂಬೇಡ್ಕರ್ ಅವರಿಂದ ಅಸ್ತಿತ್ವಕ್ಕೆ ಬಂದ ಸಂವಿಧಾನದಿಂದಲೇ ಅಮಿತ್ ಶಾ ಗೃಹ ಸಚಿವರಾಗಿದ್ದಾರೆ ಎಂಬುದು ಗಮನಕ್ಕಿರಲಿ ಎಂದರು.




# ಮಠ ನಿರ್ಮಾಣಕ್ಕೆ ದೇಣಿಗೆ ಸಮರ್ಪಣೆ

**■ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಹುಬ್ಬಳ್ಳಿಯಲ್ಲಿ ಕುರುಹಿನಶೆಟ್ಟಿ ಸಮಾಜದ ವತಿಯಿಂದ ನಿರ್ಮಾಣಗೊಳ್ಳುತ್ತಿರುವ ಶ್ರೀ ನೀಲಕಂಠೇಶ್ವರ ಮಠದ ನಿರ್ಮಾಣಕ್ಕೆ ನರೇಗಲ್ಲದ ಕುರುಹಿನಶೆಟ್ಟಿ ಸಮಾಜ ಬಾಂಧವರು 25101ರೂ.ಗಳ ಕಾಣಿಕೆಯನ್ನು ಸಮರ್ಪಿಸಿದರು.

ಸ್ಥಳೀಯ ಈಶ್ವರ ದೇವಸ್ಥಾನದಲ್ಲಿ ಈ ಕುರಿತು ಚಂದಾ ಸಂಗ್ರಹಿಸಲು ಹುಬ್ಬಳ್ಳಿಯ ಶ್ರೀ ಶಿವಶಂಕರ ಶಿವಾಚಾರ್ಯ ಮಹಾಸ್ವಾಮಿಗಳು ಜಗದ್ಗುರು ವೀರಭಿಕ್ಷಾವರ್ತಿ ನೀಲಕಂಠಮಠ ಹಳೆ ಹುಬ್ಬಳ್ಳಿ ಇವರು ಆಗಮಿಸಿದ ಸಂದರ್ಭದಲ್ಲಿ ಈ ದೇಣಿಗೆ ಕಾರ್ಯಕ್ರಮ ಜರುಗಿತು.



ಈ ಸಂದರ್ಭದಲ್ಲಿ ಮಾತನಾಡಿದ ನಿವೃತ್ತ ಸೈನಿಕ ಶಿವಪುತ್ರಪ್ಪ ಸಂಗನಾಳ, ಮನಷ್ಯ ಶಾಂತಿ, ನೆಮ್ಮದಿಯಿಂದಿರಲು ಮಠ ಮಂದಿರಗಳಿಗೆ ಸೇವೆ ಸಲ್ಲಿಸಬೇಕು. ಈ ನಿಟ್ಟಿನಲ್ಲಿ ಮಂದಿರ ನಿರ್ಮಾಣಕ್ಕೆ ಮನಃಪೂರ್ವಕವಾಗಿ ನರೇಗಲ್ಲದ ಕುರುಹಿನಶೆಟ್ಟಿ ಸಮಾಜ ಬಾಂಧವರಿಂದ ದೇಣಿಗೆ ನೀಡಿದ್ದೇವೆ. ಇದನ್ನು ಪೂಜ್ಯರು ಸ್ವೀಕರಿಸಿ, ಆಶೀರ್ವದಿಸಬೇಕೆಂದರು.

ಆಶೀರ್ವಚನ ನೀಡಿದ ಶ್ರೀಗಳು, ಮನುಷ್ಯ ದಾನ, ಧರ್ಮಗಳ ಮೂಲಕ ದೊಡ್ಡವನಾಗುತ್ತಾನೆ. ತಾನು ದುಡಿದ ಹಣದಲ್ಲಿ ಸ್ವಲ್ಪವನ್ನಾದರೂ ಸಮಾಜಕ್ಕೆ ನೀಡಿದಾಗ ಅವನ ಬದುಕು ಸಾರ್ಥಕವಾಗುತ್ತದೆ. ನರೇಗಲ್ಲದ ಸದ್ಭಕ್ತರು ನೀಡಿರುವ ಈ ಕಾಣಿಕೆ ಅಪರೂಪದ್ದು. ಭಗವಂತ ಎಲ್ಲರಿಗೂ ಒಳ್ಳೆಯದನ್ನು ಮಾಡಲಿ ಎಂದು ಆಶೀರ್ವದಿಸಿದರು.

ದೇಣಿಗೆ ಸಂಗ್ರಹಿಸಲು ಶ್ರೀಗಳೊಂದಿಗೆ ಕಾರ್ಯದರ್ಶಿ ಎಂ.ಪಿ. ಶಿವಕುಮಾರ್, ಧಾರವಾಡ ಜಿಲ್ಲಾ ಕುರುಹಿನಶೆಟ್ಟಿ ಅಭಿವೃದ್ಧಿ ಸಂಘದ ಹುಬ್ಬಳ್ಳಿಯ ಗೌರವಾಧ್ಯಕ್ಷ ಎಂ.ಬಿ. ರೋಣದ, ವರುಣ ಸಂಗನಾಳ ಆಗಮಿಸಿದ್ದರು.

ಸಮಾರಂಭದಲ್ಲಿ ರಮೇಶ ಗೆದಗೇರಿ, ಶೇಕಪ್ಪ ಗೆದಗೇರಿ, ಶ್ರೀಕಾಂತ ಸಂಗನಾಳ್, ಮುತ್ತಣ್ಣ ಗೆದಗೇರಿ, ವೀರುಪಾಕ್ಷಪ್ಪ ಸಂಗನಾಳ್, ಸಣ್ಣಪ್ಪ ಹರ್ತಿ, ಕಾಶಪ್ಪ ಸಂಗನಾಳ, ಬಸವರಾಜ ಗೆದಗೇರಿ, ಶರಣಪ್ಪ ಮುಳಗುಂದ, ಮಲ್ಲಪ್ಪ ಸಮಗಂಡಿ, ಕಮಲಾಕ್ಷಿ ಸಂಗನಾಳ್, ವನಜಾಕ್ಷಿ ಸಂಗನಾಳ್, ವೀಣಾ ಸಂಗನಾಳ್, ರೇವತಿ ಸಂಗನಾಳ್, ಈರವ್ವ ಗೆದಗೇರಿ, ಸುಷ್ಮಾ ಗೆದಗೇರಿ ಮೊದಲಾದವರಿದ್ದರು.

## ಉತ್ತಮ ಜೀವನ ಮೌಲ್ಯಗಳನ್ನು ಅಳವಡಿಸಿಕೊಳ್ಳಿ

**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ವಿದ್ಯಾರ್ಥಿ ಜೀವನದಲ್ಲಿ ಶ್ರದ್ಧೆ, ಸಮಯ ಪಾಲನೆ, ಶಿಸ್ತು ರೂಢಿಸಿಕೊಂಡು ಸ್ಪಷ್ಟ ಗುರಿಯೆಡೆಗೆ ಸಾಗಿದರೆ ಉತ್ತುಂಗ ಸ್ಥಾನಕ್ಕೇರಬಹುದು ಎಂದು ಹಿರಿಯ ಸಾಹಿತಿ ಹಾಗೂ ಗದಗ ಜಿಲ್ಲಾ ಶರಣ ಸಾಹಿತ್ಯ ಪರಿಷತ್ ಅಧ್ಯಕ್ಷ ಕೆ.ಎ. ಬಳಿಗೇರ ಹೇಳಿದರು.

ಅವರು ಪಟ್ಟಣದ ಬಿಸಿಎನ್ ವಿದ್ಯಾಸಂಸ್ಥೆಯ ಬಿಸಿಎನ್ ವಿಜನ್ ಪ.ಪೂ ಕಾಲೇಜಿನಲ್ಲಿ ದ್ವಿತೀಯ ಪಿಯುಸಿ ವಿದ್ಯಾರ್ಥಿಗಳಿಗೆ ಹಮ್ಮಿಕೊಂಡಿದ್ದ ಬೀಳ್ಕೊಡುಗೆ ಸಮಾರಂಭದಲ್ಲಿ ಮಾತನಾಡಿದರು.

ವಿದ್ಯಾರ್ಥಿಗಳು ಅವಕಾಶಗಳನ್ನು ಸಮರ್ಥವಾಗಿ ಬಳಸಿಕೊಂಡು ಉತ್ತಮ ಜೀವನ ಮೌಲ್ಯಗಳನ್ನು ಬದುಕಿನಲ್ಲಿ ಅಳವಡಿಸಿಕೊಂಡರೆ ಸಾಧನೆ ಸಾಧ್ಯವಿದೆ. ಧನಾತ್ಮಕ ಯೋಚನೆ, ಆಶಾಭಾವನೆ ಮತ್ತು ನಿರೀಕ್ಷೆಗಳಿದ್ದಲ್ಲಿ ಸಾಧನೆಗಳು ತಾನಾಗಿ ಒಲಿಯುತ್ತವೆ. ವಿದ್ಯಾರ್ಥಿ ಜೀವನ ಎನ್ನುವ ಅಮೂಲ್ಯ ಕ್ಷಣಗಳು ಎಂದಿಗೂ ಮರೆಯಲಾರದಂತೆ ಇರುವಂತೆ ಮಾಡುವದು ವಿದ್ಯಾರ್ಥಿಗಳ ಕೈಯಲ್ಲಿದೆ.




ಕಲಿತ ವಿದ್ಯಾಸಂಸ್ಥೆಯಲ್ಲಿ ನಿಮ್ಮ ಹೆಜ್ಜೆ ಗುರುತುಗಳನ್ನು ಉಳಿಸುವಂತಹ ಸಾಧನೆಯ ಜತೆಗೆ ತಂದೆ-ತಾಯಿಗಳ ಕನಸನ್ನು ನನಸು ಮಾಡಿ ಎಂದ ಅವರು, ಶಿಕ್ಷಣದಿಂದ ಸಾಧನೆ ಮಾಡಿದ ಅನೇಕ ಮಹನೀಯರ ಬಗ್ಗೆ ವಿದ್ಯಾರ್ಥಿಗಳಿಗೆ ಮನಮುಟ್ಟುವಂತೆ ವಿವರಿಸಿದರು.

ಅಧ್ಯಕ್ಷತೆ ವಹಿಸಿದ್ದ ಸಂಸ್ಥೆಯ ನಿರ್ದೇಶಕ ಲೋಹಿತ್ ನೆಲವಿಗಿ ಮಾತನಾಡಿ, ಶಿಸ್ತು, ಸಂಯಮ ಹಾಗೂ ಕಲಿಕಾಸಕ್ತಿ, ಎಲ್ಲ ಚಟುವಟಿಕೆಗಳಲ್ಲೂ ಸಕ್ರೀಯವಾಗಿ ಪಾಲ್ಗೊಳ್ಳುವಿಕೆ ಭವಿಷ್ಯಕ್ಕೆ ಮೆಟ್ಟಿಲಾಗುತ್ತವೆ. ಈ ಹಿನ್ನೆಲೆಯಲ್ಲಿ ಸಿಗುವ ಅವಕಾಶ ಬಳಸಿಕೊಳ್ಳುವ ರೀತಿಯಲ್ಲಿ ನಿಮ್ಮ ಬದುಕು ರೂಪಿತವಾಗುತ್ತದೆ. ನಿಮ್ಮಲ್ಲಿರುವ ಸಾಮರ್ಥ್ಯವನ್ನು ವ್ಯರ್ಥ ಮಾಡಿಕೊಳ್ಳದೆ ಅದನ್ನು ಉಪಯೋಗಿಸಿ ಸಾಧನೆ ಮಾಡುವ ವಿಶ್ವಾಸವನ್ನು ಹೊಂದಿ ಮುಂದೆ ಸಾಗಿ ಎಂದು ಶುಭ ಹಾರೈಸಿದರು.

ಪ್ರಾಚಾರ್ಯ ಮಂಜುನಾಥ ಬಂಡಿವಾಡ, ಡಿ.ಎಂ. ಪೂಜಾರ, ಉಪನ್ಯಾಸಕರಾದ ಗಿರೀಶರಡ್ಡಿ, ಬಸವರಾಜ ಶೆಟ್ಟರ, ರಾಜಶೇಖರ, ವಿಜಯಕುಮಾರ ಹಾಗೂ ದ್ವಿತಿಯ ಪಿಯುಸಿ ವಿದ್ಯಾರ್ಥಿಗಳು ಅನಿಸಿಕೆ ವ್ಯಕ್ತಪಡಿಸಿದರು. ಸಂಸ್ಥೆಯ ಉಪನ್ಯಾಸಕರು, ಸಿಬ್ಬಂದಿಗಳು ಹಾಜರಿದ್ದರು. ವಿದ್ಯಾರ್ಥಿಗಳಾದ ಐಶ್ವರ್ಯ, ಹರ್ಷಿತಾ, ಅಂಜಲಿ, ಸ್ನೇಹಾ, ಆರತಿ, ಉಸ್ಮಾ, ತೇಜಸ್ವಿನಿ, ಸೃಷ್ಟಿ ನಿರೂಪಿಸಿದರು.



ಡಂಬಳ ಗ್ರಾಮದಲ್ಲಿ ಗುಡ್ಡದ ಒಡೆಯ ಸನ್ನಿಧಾನದ ಅಯ್ಯಪ್ಪ ಸ್ವಾಮಿ ಮಹಾಪೂಜೆ, ಇರಮುಡಿ ಪೂಜೆ ಹಾಗೂ ಮಹಾಪಡಿ ಪೂಜೆ ಕಾರ್ಯಕ್ರಮ ಜರುಗಿತು. ಮಂಜು ಗುರುಸ್ವಾಮಿ ಗದಗ ಇವರ ಶಿಷ್ಯರಾದ ಯಲ್ಲಪ್ಪ ಉಪ್ಪಾರ ಗುರುಸ್ವಾಮಿ, ಬಸುರಾಜ ಯಲಭೋವಿಸ್ವಾಮಿ ನೇತೃತ್ವದಲ್ಲಿ ಅಯ್ಯಪ್ಪ ಸ್ವಾಮಿ ಮಹಾಪೂಜೆ ನೆರವೇರಿತು.



ಗದಗ: ವಾರ್ಡ್ ನಂಬರ್ 04ರಲ್ಲಿ ಬಿಜೆಪಿ ಗದಗ ಜಿಲ್ಲೆ ಪ್ರಕೋಸ್ಟ್ ಸಹ ಸಂಯೋಜಕ ರಮೇಶ್ ಸಜ್ಜಗಾರ್ ನೇತೃತ್ವದಲ್ಲಿ ಭೂತ ಕಮಿಟಿ ರಚನೆ ಮಾಡಲಾಯಿತು ಈ ಸಂದರ್ಭದಲ್ಲಿ ನಗರ ಬಿಜೆಪಿ ಮುಖಂಡರು ದೇವೇಂದ್ರಪ್ಪ ಗೊಟೂರ, ಮಂಜುನಾಥ್ ತಳವಾರ, ನಗರಸಭೆ ಸದಸ್ಯರು ಲಕ್ಷ್ಮಿ ಶಂಕರ್ ಕಾಕಿ, ಶಂಕರ್ ಕಾಕಿ ಹಾಗೂ ಭೂತ ಅಧ್ಯಕ್ಷರು, ಪಕ್ಷದ ಹಿರಿಯರು ಉಪಸ್ಥಿತರಿದ್ದರು.

# ವಸತಿ ಶಾಲೆಗಳು ಪ್ರತಿಭಾವಂತ ಮಕ್ಕಳ ಆಶಾಕಿರಣ : ಶಾಸಕ ಡಾ. ಚಂದ್ರು ಲಮಾಣಿ

**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಸರ್ಕಾರದ ವಸತಿ ಶಾಲೆಗಳು ಗ್ರಾಮೀಣ ಭಾಗದ ಬಡ, ಪ್ರತಿಭಾವಂತ ಮಕ್ಕಳ ಆಶಾಕಿರಣ ಮತ್ತು ಶೈಕ್ಷಣಿಕ ಜೀವನದ ನೆಲೆಯಾಗಿವೆ ಎಂದು ಶಾಸಕ ಡಾ. ಚಂದ್ರು ಲಮಾಣಿ ಹೇಳಿದರು.

ಅವರು ಭಾನುವಾರ ತಾಲೂಕಿನ ಗೊಜನೂರ ಗ್ರಾಮದ ಮೊರಾರ್ಜಿ ದೇಸಾಯಿ ವಸತಿ ಶಾಲೆಯಲ್ಲಿ 2023-24ನೇ ಸಾಲಿನ ಮಹತ್ವಾಕಾಂಕ್ಷಿ ತಾಲೂಕಗಳ ಅಭಿವೃದ್ಧಿ ಯೋಜನೆಯಡಿಯಲ್ಲಿ 2 ಕೋಟಿ ರೂ ವೆಚ್ಚದ ಪುನರುಜ್ಜೀವನ ಕಾಮಗಾರಿಗೆ ಭೂಮಿ ಪೂಜೆ ನೆರವೇರಿಸಿ ಮಾತನಾಡಿದರು.

ವಸತಿ ಶಾಲೆಗಳು ಗುರುಕುಲ ಮಾದರಿಯ ಶಿಕ್ಷಣವನ್ನು ಪ್ರೇರೇಪಿಸುವಂತಾಗಿವೆ. ಅದರಲ್ಲೂ ಗೊಜನೂರಿನ ಮೊರಾರ್ಜಿ ವಸತಿ ಶಾಲೆ ಮಕ್ಕಳ ಸರ್ವತೋಮುಖ ಬೆಳವಣಿಗೆಯೊಂದಿಗೆ ಶೈಕ್ಷಣಿಕ ಸಾಧನೆಯಲ್ಲೂ ಗಮನ ಸೆಳೆದಿದೆ. ಈ ಶಾಲೆಯಲ್ಲಿ ವಿದ್ಯಾರ್ಥಿಗಳಿಗೆ ವಸತಿ ವ್ಯವಸ್ಥೆಗೆ ಸಮಸ್ಯೆಯಿರುವುದನ್ನರಿತು ಸರ್ಕಾರ ಅನುದಾನ ಕಲ್ಪಿಸಿದೆ. ಕಾಮಗಾರಿಯ ಜವಾಬ್ದಾರಿ ಹೊತ್ತಿರುವ ಕೆಆರ್‌ಐಡಿಎಲ್‌ನವರು ಕಾಮಗಾರಿಯನ್ನು ತ್ವರಿತ ಮತ್ತು ಗುಣಮಟ್ಟದಿಂದ ನಿರ್ಮಿಸಬೇಕು ಎಂದರು.




ಇತರೇ ಜಿಲ್ಲೆಗಳಿಗೆ ಹೋಲಿಸಿದರೆ ಹಿಂದುಳಿದ ಶಿರಹಟ್ಟಿ ಮತಕ್ಷೇತ್ರದಲ್ಲಿ ವಸತಿ ಶಾಲೆಗಳ ಸಂಖ್ಯೆ ಅತ್ಯಂತ ಕಡಿಮೆಯಾಗಿವೆ. ಕ್ಷೇತ್ರದಲ್ಲಿ ಇನ್ನಷ್ಟು ವಸತಿ ಶಾಲೆಗಳಿಗೆ ಮಂಜೂರಾತಿ ಕೊಡುವಂತೆ ಸಮಾಜ ಕಲ್ಯಾಣ ಇಲಾಖೆಯ ಸಚಿವರಿಗೆ ಮನವಿ ಮಾಡಿದ್ದೇನೆ ಎಂದರು.

ಈ ಸಂದರ್ಭದಲ್ಲಿ ಗ್ರಾ.ಪಂ ಅಧ್ಯಕ್ಷ ಮಂಜುನಾಥ ಚಲವಾದಿ, ಮಾಂತಗೌಡ ಪಾಟೀಲ, ನೀಲವ್ವ ಮಾದರ, ರಮೇಶ ದನದಮನಿ, ಸಿ.ಪಿ. ಮಾಡಳ್ಳಿ, ನಿಂಗನಗೌಡ ಪಾಟೀಲ, ಮಂಜುನಾಥ ಕಣವಿ, ಚಂದ್ರಗೌಡ ಪಾಟೀಲ, ನೀಲಪ್ಪ ಗುಡ್ಡಣ್ಣವರ, ಜಾನು ಲಮಾಣಿ, ಜ್ಯೋತಿ ಪಾಟೀಲ, ಶಂಭು ಪಾಟೀಲ, ಪಂಚಪ್ಪ ಸವಣೂರ ಸೇರಿದಂತೆ ಗ್ರಾ.ಪಂ ಸದಸ್ಯರು, ಪ್ರಾಚಾರ್ಯ ಎನ್.ಕೆ. ಹತ್ತಿಕಾಳ, ಶಿಕ್ಷಕರಾದ ನಾರಾಯಣ ಹೊಸೂರ, ಕೆ.ಪಿ. ಪಾಟೀಲ, ಶಿಕ್ಷಕರು, ನಿಲಯ ಪಾಲಕ ಅಮೀರ ನದಾಫ್ ಮುಂತಾದವರಿದ್ದರು.

## ಶಿಕ್ಷಕ ರಾಮಚಂದ್ರ ಮೋನೆಯವರಿಗೆ ಸನ್ಮಾನ

**■ವಿಜಯಸಾಕ್ಷಿ ಸುದ್ದಿ, ಗದಗ**

ಇಲ್ಲಿನ ವಿದ್ಯಾದಾನ ಸಮಿತಿ ಶಾಲೆಯಲ್ಲಿ ದಶಕಗಳ ಕಾಲ ಸೇವೆ ಸಲ್ಲಿಸಿ ನಿವೃತ್ತಿ ಹೊಂದಿದ ವಿಜ್ಞಾನ ಶಿಕ್ಷಕರಾದ ರಾಮಚಂದ್ರ ಮೋನೆಯವರನ್ನು ಸ್ವರಾಲಯ ಸ್ಕೂಲ್ ಆಫ್ ಮ್ಯೂಜಿಕ್‌ನಿಂದ ಸನ್ಮಾನಿಸಲಾಯಿತು.

ಸ್ವರಾಲಯ ಸ್ಕೂಲ್ ಆಫ್ ಮ್ಯೂಜಿಕ್‌ನ ಅಧ್ಯಕ್ಷ ಗುರುನಾಥ ಸುತಾರ ಮಾತನಾಡಿ, ರಾಮಚಂದ್ರ ಮೋನೆಯವರು ವೃತ್ತಿಯಿಂದ ವಿಜ್ಞಾನ ಶಿಕ್ಷಕರಾದರೂ ಸಂಗೀತದಲ್ಲಿ ಮಾಡಿದ ಸಾಧನೆಗಳನ್ನು ಹಾಗೂ ಸ್ವತಃ ಒಬ್ಬ ತಬಲಾವಾದಕರಾಗಿ ಹಲವಾರು ಸುಪ್ರಸಿದ್ಧ ಸಂಗೀತಗಾರರಿಗೆ ಸಾಥ್ ನೀಡಿದ್ದನ್ನು ನೆನೆಸಿಕ್ಕೊಳ್ಳುತ್ತಾ, ತಮ್ಮ ಸಂಗೀತ ಕೇಂದ್ರಕ್ಕೆ ನೀಡುತ್ತಿರುವ ಸಹಾಚು-ಸಹಕಾರವನ್ನು ನೆನೆದರು.

ಸಂಗೀತ ಶಿಕ್ಷಕ ಪ್ರಸಾದ ಸುತಾರ ಮಾತನಾಡಿದರು. ಕಾರ್ಯಕ್ರಮದಲ್ಲಿ, ವಿರೇಶ ಮ್ಯಾಗೇರಿ, ವೀಣಾ ಮ್ಯಾಗೇರಿ, ಶಿವಾನಂದ ಭಾವಿಕಟ್ಟಿ, ಡಾ. ಭರತ ಬೀಡನಾಳ, ಡಾ. ಎಸ್.ಕೆ. ಮ್ಯಾಗೇರಿ, ವಿದ್ಯಾರ್ಥಿಗಳಾದ ತನ್ವೀ ಮೋನೆ, ಧನ್ಯಾ ಶಿರೂರ, ಶ್ರೀನಿವಾಸ ಮ್ಯಾಗೇರಿ, ಅನ್ವಿತಾ ಮುಂತಾದವರಿದ್ದರು. ಅನ್ವಿತಾ, ಧನ್ಯಾ ಮತ್ತು ಶ್ರೀನಿವಾಸ ಮ್ಯಾಗೇರಿ ಪ್ರಾರ್ಥಿಸಿದರು. ಪ್ರಸಾದ ಸುತಾರ ಸ್ವಾಗತಿಸಿದರು. ಪುಟ್ಟರಾಜೇಶ ಗುತ್ತರಗಿ ಕಾರ್ಯಕ್ರಮ ನಿರೂಪಿಸಿದರು. ವೀಣಾ ಮ್ಯಾಗೇರಿ ವಂದಿಸಿದರು.



VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka